ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 144 RNI Number : KNKAN/25/A2770 02-06-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :144 ರಾಯಚೂರು 02-06-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ದೆಹಲಿಯಲ್ಲಿ ಡಿಕೆಶಿ ಮತ್ತು ಸಿದ್ದು: ಹೈಕಮಾಂಡ್ ನಾಯಕರ ಭೇಟಿ, ಸಂಪುಟ ರಚನೆ ಬಗ್ಗೆ ಚರ್ಚೆ!

ಬೆಂಗಳೂರು : ಕರ್ನಾಟಕದ ನಿಯೋಜಿತ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಮತ್ತು ನಿರ್ಗಮಿತ ಸಿಎಂ ಸಿದ್ದರಾಮಯ್ಯ ಅವರು ಸೋಮವಾರ ನವದೆಹಲಿಗೆ ತೆರಳಿದ್ದಾರೆ. ದೆಹಲಿಯಲ್ಲಿ ಪಕ್ಷದ ವರಿಷ್ಠರನ್ನು ಭೇಟಿ ಮಾಡಿ, ಹೊಸ ಸಚಿವ ಸಂಪುಟವನ್ನು ಅಂತಿಮಗೊಳಿಸಲಿದ್ದಾರೆ ಎಂದು ಕಾಂಗ್ರೆಸ್ ಪಕ್ಷದ ಮೂಲಗಳು ತಿಳಿಸಿವೆ.

ದೆಹಲಿಗೆ ತೆರಳುವ ಮುನ್ನ ಮಾತನಾಡಿದ ನಿಯೋಜಿತ ಸಿಎಂ ಡಿ ಕೆ ಶಿವಕುಮಾರ್, ಸಿದ್ದರಾಮಯ್ಯ ಮತ್ತು ನಾನು ಇಬ್ಬರೂ ದೆಹಲಿಗೆ ಹೋಗುತ್ತಿದ್ದೇವೆ ಎಂದು ತಿಳಿಸಿದರು. ಈ ವೇಳೆ ಅವರು ಹೆಚ್ಚಿನ ಮಾಹಿತಿಯನ್ನು ಬಹಿರಂಗಪಡಿಸಲಿಲ್ಲ. ಅವರ ಪ್ರಯಾಣದ ವಿವರಗಳ ಪ್ರಕಾರ, ಇಬ್ಬರೂ ನಾಯಕರು ಮಧ್ಯಾಹ್ನದ ವೇಳೆಗೆ ದೆಹಲಿ ತಲುಪಲಿದ್ದಾರೆ. ನಂತರ ಅವರು ಸಂಪುಟ ವಿಸ್ತರಣೆ ಕುರಿತು ಚರ್ಚಿಸಲಿದ್ದಾರೆ.

ರಾಜ್ಯ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಡಿ. ಕೆ. ಶಿವಕುಮಾರ್ ಅವರು, ಜೂನ್ 3 ರಂದು ಸಂಜೆ 4:05ಕ್ಕೆ ಲೋಕ ಭವನದ ಆವರಣದಲ್ಲಿ ಕೆಲವು ಸಚಿವರೊಂದಿಗೆ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ಅವರು ಶನಿವಾರ ಕರ್ನಾಟಕದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ ಅಧಿಕೃತವಾಗಿ ಆಯ್ಕೆಯಾದರು. ಸಚಿವ ಸ್ಥಾನದ ಆಕಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿರುವುದು ಮತ್ತು ಸೀಮಿತ ಸಂಖ್ಯೆಯ ಸಚಿವ ಸ್ಥಾನಗಳು ಕೈಯಲ್ಲಿರುವುದರಿಂದ, ಶಿವಕುಮಾರ್ ಅವರಿಗೆ ಇಕ್ಕಟ್ಟಿಗೆ ಸಿಲುಕಿದ್ದಾರೆ. ಏಕೆಂದರೆ, ಅವರು ಹೊರಗುಳಿದವರಿಂದ ದೊಡ್ಡ ಪ್ರಮಾಣದ ಅಸಮಾಧಾನಕ್ಕೆ ಒಳಗಾಗುವ ಅಪಾಯವಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ತಮ್ಮೊಂದಿಗೆ ಪ್ರಮಾಣ ವಚನ ಸ್ವೀಕರಿಸುವ ಸಚಿವರ ಸಂಖ್ಯೆಯ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಶಿವಕುಮಾರ್, ಅದರ ಬಗ್ಗೆ ನನಗೆ ಗೊತ್ತಿಲ್ಲ. ಪಕ್ಷದ ಹೈಕಮಾಂಡ್ ಏನು ನಿರ್ಧರಿಸುತ್ತದೆಯೋ ಅದನ್ನು ಮಾಡಲಾಗುತ್ತದೆ. ನಾನು ಅದರ ಬಗ್ಗೆ ಪ್ರತಿಕ್ರಿಯಿಸಲು ಬಯಸುವುದಿಲ್ಲ ಎಂದು ಭಾನುವಾರ ತಿಳಿಸಿದ್ದರು .

ಹೊಸ ಸಚಿವ ಸಂಪುಟ ರಚನೆಗೆ ಸಂಬಂಧಿಸಿದಂತೆ ಇನ್ನೂ ಯಾವುದೇ ಪ್ರಸ್ತಾವನೆ ಬಂದಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಮರ್ಥಿಸಿಕೊಂಡಿದ್ದರು.

ಏತನ್ಮಧ್ಯೆ, ಸಚಿವ ಸ್ಥಾನದ ಆಕಾಂಕ್ಷಿಗಳಿಂದ ಲಾಬಿ ತೀವ್ರಗೊಂಡಿದ್ದು, ಅವರಲ್ಲಿ ಹಲವರು ಹೈಕಮಾಂಡ್ ಮುಂದೆ ತಮ್ಮ ಬೇಡಿಕೆ ಮಂಡಿಸಲು ನವದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ. ಹಲವಾರು ಮಾಜಿ ಸಚಿವರು ಮತ್ತು ಶಾಸಕರು ಶಿವಕುಮಾರ್ ಮತ್ತು ಸಿದ್ದರಾಮಯ್ಯ ಇಬ್ಬರನ್ನೂ ಭೇಟಿ ಮಾಡಿದ್ದಾರೆ.

ಸಿದ್ದರಾಮಯ್ಯ ಅವರ ವಿಸರ್ಜಿಸಲಾದ ಸಚಿವ ಸಂಪುಟದ ಕೆಲವು ಸಚಿವರು ಹೊಸ ಸಂಪುಟದಲ್ಲಿ ತಮ್ಮ ಸ್ಥಾನಗಳನ್ನು ಭದ್ರಪಡಿಸಿಕೊಳ್ಳಲು ಪ್ರಯತ್ನಿಸುತ್ತಿದ್ದರೆ, ಈ ಬಾರಿ ಸಂಪುಟದಲ್ಲಿ ಸ್ಥಾನ ಪಡೆಯುವ ನಿರೀಕ್ಷೆಯಲ್ಲಿರುವ ಶಾಸಕರು ಕೂಡ ರಾಷ್ಟ್ರ ರಾಜಧಾನಿಯನ್ನು ತಲುಪಿದ್ದಾರೆ.

ಮೂಲಗಳ ಪ್ರಕಾರ, ಹೊಸ ಸಚಿವ ಸಂಪುಟದಲ್ಲಿ ಹಳೆಯ ಮತ್ತು ಹೊಸ ಸದಸ್ಯರು ಇಬ್ಬರೂ ಇರುವ ಸೂಚನೆಗಳಿವೆ. ಜಾತಿ ಸಮೀಕರಣಗಳು, ಪ್ರದೇಶಗಳು ಮತ್ತು ಸಿದ್ದರಾಮಯ್ಯ ನಿಷ್ಠರನ್ನು ಗಮನದಲ್ಲಿಟ್ಟುಕೊಂಡು ಪ್ರಾತಿನಿಧ್ಯವನ್ನು ಖಚಿತಪಡಿಸಿಕೊಳ್ಳುವ ಮೂಲಕ ಸಂಪುಟದಲ್ಲಿ ಸಮತೋಲನವನ್ನು ಸಾಧಿಸಲು ಪ್ರಯತ್ನಿಸಲಾಗುತ್ತದೆ ಎಂಬುದು ತಿಳಿದುಬಂದಿದೆ.

ಸಿದ್ದರಾಮಯ್ಯ ಸಂಪುಟದಿಂದ ಹಲವು ಉಪಮುಖ್ಯಮಂತ್ರಿಗಳು ಆಯ್ಕೆಯಾಗಬಹುದು ಮತ್ತು ಕೆಲವು ಸಚಿವರನ್ನು ಉಳಿಸಿಕೊಳ್ಳಲಾಗುವುದಿಲ್ಲ ಎಂಬ ಊಹಾಪೋಹಗಳು ಹರಡಿವೆ. ಅದಾಗ್ಯೂ, ಪಕ್ಷದ ಮೂಲಗಳ ಪ್ರಕಾರ, ಸಂಪುಟ ರಚನೆ ಕುರಿತು ಪಕ್ಷದ ನಾಯಕತ್ವದೊಂದಿಗೆ ಇನ್ನೂ ಚರ್ಚೆಗಳು ನಡೆಯುತ್ತಿವೆ.

ಇನ್ನು ಶಿವಕುಮಾರ್ ಅವರು ಪ್ರಸ್ತುತ ಹೊಂದಿರುವ ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಹುದ್ದೆಯ ಬಗ್ಗೆಯೂ ಮಾತುಕತೆಗಳು ನಡೆಯುತ್ತಿವೆ. ಹಿರಿಯ ಶಾಸಕ

ಅಗತ್ಯ ವಸ್ತುಗಳ ಬೆಲೆ ಏರಿಕೆ ನೀಟ್ ಪರೀಕ್ಷೆ ಹಗರಣದ ತನಿಖೆ ಚುರುಕುಗೊಳಿಸಿ ಯುವ ಕಾಂಗ್ರೇಸ್ ತಾಲೂಕು ಸಮಿತಿ ಒತ್ತಾಯ

ಸಿಂಧನೂರು,ಜೂ.01-

ನೀಟ್ ಹಗರಣ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆ ಕುರಿತು ನೀಟ ಹಗರಣದ ತನಿಖೆಯನ್ನು ಚುರುಕುಗೊಳಿಸುವಂತೆ ಯುವ ಕಾಂಗ್ರೆಸ್ ತಾಲೂಕು ಸಮಿತಿ ಆಗ್ರಹವಾಗಿದೆ.



ಸಿಂಧನೂರು ತಾಲೂಕು ಯುವ ಕಾಂಗ್ರೆಸ್ ತಾಲೂಕು ತಹಶೀಲ್ದಾರ್ ಮುಂಭಾಗದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತ ಪ್ರತಿಭಟಿಸಿದರು

ನಂತರ ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ ಅವರ ಮೂಲಕ ಗೌರವಾನ್ವಿತ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿ ಆಗ್ರಹಿಸಿದರು

ನಂತರ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಸಿಂಧನೂರು ತಾಲೂಕ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಹಮ್ಮದ್ ಯೂಸೂಫ್ ಅವರು ಕೇಂದ್ರದಲ್ಲಿ ಹಲವಾರು ಬಾರಿ ನೀಟಿ ಪರಿಕ್ಷೆ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದ್ದು ಮತ್ತೆ ಅದೇ ರೀತಿ 3ನೇ ಬಾರಿಗೆ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದು ಸರ್ಕಾರದ ವೈಫಲ್ಯ ಇದನ್ನು ತಾವುಗಳೂ ಸೂಕ್ತ ತನಿಖೆ ಮೂಲಕ ತನಿಕೆಯನ್ನು ಚುರುಕುಗೊಳಿಸಿ ಅದರಲ್ಲಿ ಭಾಗಿಯಾದ ಸರ್ಕಾರದ ಇತರೆ ವ್ಯಕ್ತಿಗಳ ಮೇಲೆ ಸೂಕ್ತಕ್ರಮ ಕೈಗೊಳ್ಳಬೇಕೆಂದು ಎಂದು ಎಸ್ಸಿ ಘಟಕದ ತಾಲೂಕು ಅಧ್ಯಕ್ಷ ಅಮರೇಶ ಗಿರಿಜಾಲಿ ಆಗ್ರಹಿಸಿದರು .

ಪ್ರಸ್ತುತಾ ಸರ್ಕಾರದಲ್ಲಿ 3ನೇ ಬಾರಿಗೆ ಪ್ರಧಾನ ಮಂತ್ರಿಗಳಾಗಿ ಆಯ್ಕೆ ಆಗಿರುವು ನರೇಂದ್ರ ಮೋದಿಯವರು ರೈತರು ಬಡವರ ಬಗ್ಗೆ ಹಾಗೂ ಅಗತ್ಯ ವಸ್ತುಗಳಿಂದ (ಅಕ್ಕಿ ಬೇಲೆ ಎಣ್ಣೆ) ಇತ್ಯಾದಿ ವಸ್ತುಗಳ ಬೆಲೆ ಗಗನಕ್ಕೆ ಏರಿಸಿದ್ದು ಬಡವರಿಗೆ ಮದ್ಯಮ ವರ್ಗದವರಿಗೆ ಬೆಲೆ ಏರಿಕೆ ಆತಂಕ ಉಂಟುಮಾಡಿದೆ ಅದರ ಜೊತೆಗೆ ಪೆಟ್ರೋಲ್ ಮತ್ತು ಡಿಸೇಲ್ ದರವು ಹೆಚ್ಚಿಗೆ ಆಗಿದ್ದು, ಧ್ಯಮ ವರ್ಗದ ಜನರ ಬದುಕು ಆತಂಕದ ಸ್ಥಿತಿಯಲ್ಲಿ ಸಾಗುತ್ತಿದ್ದು, ಆದ್ದರಿಂದ ಸನ್ಮಾನ್ಯ ಶ್ರೀ ರಾಷ್ಟ್ರಪತಿಗಳಾದ ತಾವುಗಳು ಬೆಲೆ

ಸಿಂಧನೂರಿನ ಕಾರುಣ್ಯ ಆಶ್ರಮದಲ್ಲಿ ಬಳ್ಳಾರಿಯ ಪಾತೂರಿ ಕುಟುಂಬದಿಂದ. ವಿಶ್ವ ಹಸಿವು ದಿನಾಚರಣೆ

ಸಿಂಧನೂರು,ಜೂ.01- ನಗರದ ಒಳ ಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಸರಕಾರದ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರೀ) ಹರಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬೂಂದಿ ಬಂದಿ್ವ'ಾಂದ' ಆಶ್ರಮದಲ್ಲಿ ದಿವಂಗತ ಪಾತೂರಿ ವೆಂಕಟೇಶ್ವರ ರಾವು ಬಳ್ಳಾರಿ ಇವರ ದ್ವಿತೀಯ ವರ್ಷದ ಪುಣ್ಯರಾಧನೆ ಕಾರ್ಯಕ್ರಮ ಹಾಗೂ ವಿಶ್ವ ಹಸಿವು ದಿನಾಚ'ರ'ಣ' ಕಾರ್ಯಕ್ರಮವನ್ನು. ಪದ್ಮಾ ನರ್ಸಿಂಗ್ ಹೋಮ್, ಸಿಂಧನೂರು. ಹಾಗೂ



ಬಳ್ಳಾರಿಯ ಪಾತೂರಿ ಕುಟುಂಬದಿಂದ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ. ಅರ್ಥಪೂರ್ಣವಾಗಿ. ವಿಶ್ವ ಹಸಿವು ದಿನಾಚರಣೆಯನ್ನು ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಪಾತೂರಿ ಕುಟುಂಬದ ಪಾತೂರಿ ಚಂದ್ರಶೇಖರ್ ಅವರನ್ನು ಆಶ್ರಮದ ವತಿಯಿಂದ ಸನ್ಮಾನಿಸಿ ಗೌರವಿಸಿ ನೆನಪಿನ ಕಾಣಿಕೆಯನ್ನು ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ. ತಿಮ್ಮಪ್ಪ ನಾಯಕ್ ಉಪನ್ಯಾಸಕರು ಮಾತನಾಡಿ ಸುಮಾರು ವರ್ಷಗಳಿಂದ ನಿರಂತರವಾಗಿ ಕಾರುಣ್ಯ ವೃದ್ಧಾಶ್ರಮವನ್ನು ಮುಂದುವರಿಸಿಕೊಂಡು ಆಶ್ರಮದಲ್ಲಿ ನೆಲೆಯೂರಿರುವ ವೃದ್ದರಿಗೆ ಮನೆ ಮಗನಂತೆ ನೋಡಿಕೊಳ್ಳುತ್ತಿದ್ದಾರೆ. ಇಂದಿನ ದಿನಮಾನದಲ್ಲಿ ಒಂದು ಕುಟುಂಬವನ್ನು ಸಾಕುವುದು ಕಷ್ಟಕರ ಆ ನಿಟ್ಟನಲ್ಲಿ ಡಾಕ್ಟರ್ ಚನ್ನಬಸವ ಸ್ವಾಮೀಜಿ ಹಿರೇಮಠರವರು ಸುಮಾರು 70ಕ್ಕೂ ಹೆಚ್ಚು ಕಣ್ಣು ಕಿವಿ ಮೂಗು ಕಾಲು ಇನ್ನೂ ಕೆಲವರಿಗೆ ಮೇಲಕ್ಕೆ ಹೇಳಲು ಸಹ ಆಗುವುದಿಲ್ಲ ಅಂತಹ ಅನಾಥ ವೃದ್ದರಿಗೆ ದಿನನಿತ್ಯದ ಸೇವೆ ಸಲ್ಲಿಸುತ್ತಿರುವ. ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಹೊರಟನೂರು ಗ್ರಾಮದ

3ನೇ ಪುಟ.....

ಇಬ್ಬರೂ ನಾಯಕರುಗಳ ಪ್ರತಿಷ್ಟೆ. ಯಾರು ಸಚಿವರು..? ಸಿಂಧನೂರು ಅಧಿಪತಿ ಯಾರು.. ಜನರಲ್ಲಿ ಕುತೂಹಲ!

ಸಿಂಧನೂರು,ಜೂ.01-

ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ಮೇಲುಗೈ ಸಾಧಿಸಿ ಡಿ ಕೆ ಶಿವಕುಮಾರ್ ಅವರು ನೇತೃತ್ವದಲ್ಲಿ ಸಚಿವ ಸಂಪುಟದಲ್ಲಿ ಶಾಸಕರುಗಳು ಚರ್ಚೆಗೆ ಗ್ರಾಸವಾಗಿದ್ದು. ಈಗ ಸಿಂಧನೂರು ತಾಲೂಕು ವಿಧಾನ ಸಭಾ ಕ್ಷೇತ್ರದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಹಾಗೂ ವಿಧಾನ ಪರಿಷತ್ ಸದಸ್ಯರು ಬಸನಗೌಡ ಬಾದರ್ಲಿ ಅವರಲ್ಲಿ ಸಚಿವ ಸ್ಥಾನ ಪಡೆಯಬೇಕು ಎಂದು ದೆಹಲಿ. ರಾಜ್ಯ ನಾಯಕರುಗಳಲ್ಲಿ ಬಾರಿ ಲಾಬಿ ನಡೆಸಿದರೆ. ತಾಲೂಕಿನಲ್ಲಿ ಅವರವರ ಬೆಂಬಲಿಗರು ದೇವರ ಮೊರೆ ಹೋಗಿರು



ವುದನ್ನು ನೋಡಿ ಇದು ನಗೆ ಪಾತವಾಗಿದೆ ಎಂದು ಸಾರ್ವಜನಿಕರು ವ್ಯಂಗ್ಯವಾಗಿ ಮಾತನಾಡುತ್ತಿದ್ದಾರೆ.

ಏಕೆಂದರೆ ದೇಶದಲ್ಲಿ ದಿನ ಬಳಕೆ ವಸ್ತುಗಳ. ಡಿಸೇಲ್ ಪೆಟ್ರೋಲ್ ಗ್ಯಾಸ್ ಸಿಲಿಂಡರ್ ದರ ಬೆಲೆ ಏರಿಕೆ ಬಿಸಿ ತಟ್ಟಿ ಬಿಸಿ ತುಪ್ಪವಾಗಿ ಮಾರ್ಪಟ್ಟಿದೆ. ಇದರ ಬಗ್ಗೆ ಯಾವ ಜನಪ್ರತಿನಿಧಿಗಳು ತಮ್ಮ ಬೆಂಬಲಿಗರ ಸಾರ್ವಜನಿಕರು ಪರವಾಗಿ ಅಭಿವೃದ್ಧಿ ಬಗ್ಗೆ ಯಾವತ್ತಾದರೂ ದೇವರ ಮೊರೆ ದರ್ಶನಕ್ಕೆ ಎಂದಾದರೂ ಹೋಗಿದ್ದಾರೇ..? ಈಗ ದೇವರು ಹೆಸರಿನಲ್ಲಿ ತಮ್ಮ ನಾಯಕರುಗಳು ಸಚಿವ ರಾಗಬೇಕು ಎಂದು ಹಂಬಲದೊಂದಿಗೆ ದೇವಸ್ಥಾನಕ್ಕೆ ಹೋಗಿ ಕಾರ್ಯಕರ್ತರು ವಿಶೇಷ ಪೂಜೆ ಮಾಡಿಸಿ ದೇವರ ಮುಂದೆ 101 ಕಾಯಿ ಹೊಡೆಯುತ್ತಾರೆ.ಇದು ಅಭಿವೃದ್ಧಿಯೇ... ಎಂದು ಸಾರ್ವಜನಿಕರ ಪ್ರಶ್ನೆ...??

ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ದೊರೆಯಬೇಕು ಎಂದು



ಆಗ್ರಹಿಸಿ ಶಾಸಕ ಹಂಪನಗೌಡ ಬಾದರ್ಲಿ ಅವರ ಬೆಂಬಲಿಗರು ನಗರದ ಶ್ರೀ ಅಂಬಾ ದೇವಿ ವಿಶೇಷ ಪೂಜೆ ಮಾಡಿಸಿ 101 ಕಾಯಿ ಹೊಡಿದು ಅಭಿಮಾನಿಗಳು ತಾಲೂಕಿನ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥನೆ ನಡೆಸಿದರು.

ನಿನ್ನೆ ಬಸನಗೌಡ ಬಾದರ್ಲಿ ಅವರು ಬೆಂಬಲಿಗರು ಗುತ್ತೂರಿನ ಮಾರುತೇಶ್ವರ ದೇವಸ್ಥಾನ, ಶರಣ ಬಸವೇಶ್ವರ ದೇವಸ್ಥಾನ. ದ್ಯಾವಮ್ಮ ದೇವಸ್ಥಾನ ಹಾಗೂ ಅಂಬಾದೇವಿ ದೇವಸ್ಥಾನಗಳಲ್ಲಿ ಬೆಂಬಲಿಗರು ಸೇರಿಕೊಂಡು ಬಸನಗೌಡ ಬಾದರ್ಲಿ ಅವರಿಗೆ ಸಚಿವ ಸ್ಥಾನ ದೊರೆಯಲೆಂದು ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಆದರೆ ತಾಲೂಕಿನ ಸಾರ್ವಜನಿಕರು ಇಲ್ಲಿ ಮಾತಾಡುವಂಥದ್ದು. ತಾಲೂಕಿನ ಇಬ್ಬರೂ ನಾಯಕರುಗಳು ಬಾದರ್ಲಿ ಕುಟುಂಬದ ಸದಸ್ಯರುಗಳೇ ಇಲ್ಲಿ ಯಾರು ಸಚಿವರಾದರು ಸಹ ಆಶ್ಚರ್ಯ ಪಡುವಂತದ್ದೇನಿಲ್ಲ

3ನೇ ಪುಟ.....

ಹೊಸ ನೀರು ಸೇರ್ಪಡೆ, ಕುದಿಸಿ ಆರಿಸಿ ನೀರು ಕುಡಿಯಿರಿ: ನಿಖಿಲ್ ಕುಮಾರ್ ಪಾಟೀಲ್

ವಿಜಯಪುರ,ಜೂ.01-

ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಮನಗೂಳಿ ಪಟ್ಟಣದ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಕೃಷ್ಣಾ ನದಿಯ ಜಲಾನಯನ ಪ್ರದೇಶಗಳಲ್ಲಿ ಮಳೆಯಾಗುವ ಸಂಭವವಿರುವುದರಿಂದ ನೀರಿನ ಗಡಸುತನ ಕಂಡಕ್ಟಿವಿಟಿ ಮತ್ತು ಟಿ.ಡಿ.ಎಸ ಪ್ರಮಾಣವು ಹೆಚ್ಚಾಗುವ ಸಾದ್ಯತೆ ಇದೆ ಎಂದು ಪಟ್ಟಣ ಪಂಚ್ಯಾತಿಯ ಮುಖ್ಯಾಧಿಕಾರಿಯಾದ ನಿಖಿಲ್ ಕುಮಾರ್ ಪಾಟೀಲ್ ತಿಳಿಸಿದ್ದಾರೆ.



ಹೊಸ ನೀರು ನದಿಯಲ್ಲಿ ಸೇರ್ಪಡೆಗೊಳ್ಳುತ್ತದೆ. ಹೊಸ ನೀರು ಸೇರ್ಪಡೆಗೊಳ್ಳುವುದರಿಂದ ನೀರಿನ ಗಡಸುತನ ಕಂಡಕ್ಟಿವಿಟಿ ಮತ್ತು ಟಿ.ಡಿ.ಎಸ ಪ್ರಮಾಣವು ಹೆಚ್ಚಾಗುವ ಸಾದ್ಯತೆ ಇರುತ್ತದೆ. ಕಾರಣ ಮನಗೂಳಿ ಪಟ್ಟಣದ ಜನತೆಗೆ ನೀರನ್ನು ಕುದಿಸಿ ಆರಿಸಿ ಕುಡಿಯಲು ಈ ಮೂಲಕ ವಿನಂತಿಸಿದೆ..

ಈ ಕುರಿತು ಪ್ರಕಟಣೆ ನೀಡಿದ ಮುಖ್ಯಾಧಿಕಾರಿ , ಹೊಸ ನೀರಿನ ಸೇರ್ಪಡೆಯಿಂದ ನೀರಿನ ರಾಸಾಯನಿಕ ಗುಣಲಕ್ಷಣಗಳಲ್ಲಿ ತಾತ್ಕಾಲಿಕ ಬದಲಾವಣೆಗಳು ಕಂಡುಬರಬಹುದು. ಇದರಿಂದ ನೀರಿನ ರುಚಿ ಹಾಗೂ ಗುಣಮಟ್ಟದಲ್ಲಿ ಸ್ವಲ್ಪ ವ್ಯತ್ಯಾಸವಾಗುವ ಸಾಧ್ಯತೆ ಇದ್ದು, ಸಾರ್ವಜನಿಕರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

ಆದಾಗ್ಯೂ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಮನಗೂಳಿ ಪಟ್ಟಣದ ನಾಗರಿಕರು ಕುಡಿಯುವ ನೀರನ್ನು ಕಡ್ಡಾಯವಾಗಿ ಕುದಿಸಿ, ಆರಿಸಿದ ಬಳಿಕವೇ ಬಳಸಬೇಕು ಎಂದು ಮನವಿ ಮಾಡಿದ್ದಾರೆ.

ವಿಶೇಷವಾಗಿ ಮಕ್ಕಳು, ವೃದ್ಧರು ಹಾಗೂ ಆರೋಗ್ಯ ಸಮಸ್ಯೆ ಇರುವವರು ಹೆಚ್ಚು ಎಚ್ಚರಿಕೆ ವಹಿಸುವಂತೆ ಸಲಹೆ ನೀಡಿದ್ದಾರೆ.

ಸುರಕ್ಷಿತ ಕುಡಿಯುವ ನೀರಿಗಾಗಿ ನೀರನ್ನು ಕುದಿಸಿ, ಆರಿಸಿ ಕುಡಿಯುವುದು ಉತ್ತಮ

3ನೇ ಪುಟ.....

ಅಕ್ರಮ ಮಧ್ಯ ಮಾರಾಟದ ಅನುಮಾನ

ಅಂಗಡಿಗಳನ್ನು ಪರಶೀಲಿಸಿದ ಅಬಕಾರಿ ವೃತ್ತ ನಿರೀಕ್ಷಕಿ



ಲಿಂಗಸುಗೂರು,ಜೂ.01- ತಾಲೂಕಿನ ಪೂಲಭಾವಿ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದೆ ಎಂಬ ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ಅಬಕಾರಿ ವೃತ್ತ ನಿರೀಕ್ಷಕಿ ಲಕ್ಷ್ಮೀದೇವಿ ಅವರು ತಮ್ಮ ಸಿಬ್ಬಂದಿಯೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ ವಿವಿಧ ಅಂಗಡಿಗಳಲ್ಲಿ ಪರಿಶೀಲನೆ ನಡೆಸಿದರು.

ಪರಿಶೀಲನೆ ಬಳಿಕ ಗ್ರಾಮಸ್ಥರು ಹಾಗೂ ಅಂಗಡಿ ಮಾಲೀಕರೊಂದಿಗೆ ಸಭೆ ನಡೆಸಿದ ಅವರು, ಗ್ರಾಮದಲ್ಲಿ ಯಾವುದೇ ರೀತಿಯ ಅಕ್ರಮ ಮದ್ಯ ಮಾರಾಟ ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.ಸಾರ್ವಜನಿಕರು ಅಕ್ರಮ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡುವ ಮೂಲಕ ಇಲಾಖೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಅಂಗಡಿ ಮಾಲೀಕರು ಪರವಾನಗಿ ಇಲ್ಲದೆ ಮದ್ಯ ಮಾರಾಟ ಮಾಡಬಾರದು.ನಿಯಮ ಉಲ್ಲಂಘನೆ ಮಾಡಿದರೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ತಡೆಗಟ್ಟಲು ಅಬಕಾರಿ ಇಲಾಖೆ ನಿರಂತರ ನಿಗಾ ವಹಿಸಲಿದೆ ಎಂದು ಲಕ್ಷ್ಮೀದೇವಿ ತಿಳಿಸಿದರು.

ಈ ಸಂದರ್ಭದಲ್ಲಿ ಸಬ್ ಇನ್ಸ್‌ಪೆಕ್ಟರ್ ಶರಣಪ್ಪ, ಸಿಬ್ಬಂದಿಗಳಾದ ಬಸವರಾಜ್, ಮಂಜು ಎಚ್.ಸಿ.ಸೇರಿ ಇತರರು ಇದ್ದರು.

3ನೇ ಪುಟ.....

ಬಂಗಾರದ ಬೆಲೆ ಏರಿಕೆ ನಡುವೆ ಹೊಸ ಸ್ಕ್ಯಾಮ್: ಅಂಗಡಿ ಮಾಲೀಕರಲ್ಲಿ ಆತಂಕ



ವ್ಯಾಪಾರಿಗಳಿಗೆ ಎಚ್ಚರಿಕೆ

ಹಳೆಯ ಅಡಮಾನ ದಾಖಲೆಗಳನ್ನು ಸುರಕ್ಷಿತವಾಗಿ ಸಂರಕ್ಷಿಸಿ.
ದಾಖಲೆಗಳಿಲ್ಲದೆ ಯಾವುದೇ ಹಕ್ಕು ಯನ್ನು ಒಪ್ಪಿಕೊಳ್ಳಬೇಡಿ.
ಅನುಮಾನಾಸ್ಪದ ವ್ಯಕ್ತಿಗಳ ಗುರುತು ಮತ್ತು ದಾಖಲೆಗಳನ್ನು ಪರಿಶೀಲಿಸಿ.
ಬೆದರಿಕೆ ಅಥವಾ ಒತ್ತಡದ ಪ್ರಯತ್ನ ಕಂಡುಬಂದರೆ ತಕ್ಷಣ ಪೊಲೀಸರಿಗೆ ದೂರು ನೀಡಿ.
ಸಿಸಿಟಿವಿ ದೃಶ್ಯಗಳನ್ನು ಸಂರಕ್ಷಿಸಿ ಹಾಗೂ ಅಗತ್ಯವಿದ್ದರೆ ತನಿಖೆಗೆ ಒದಗಿಸಿ.)

ರಾಯಚೂರು, ಜೂ.01-

ಬಂಗಾರದ ಬೆಲೆ ದಿನದಿಂದ ದಿನಕ್ಕೆ ಗಗನಕ್ಕೇರುತ್ತಿರುವ ಬೆನ್ನಲ್ಲೇ ಜಿಲ್ಲೆಯಲ್ಲಿ ಹೊಸ ಮಾದರಿಯ ವಂಚನೆ (ಸ್ಕ್ಯಾಮ್) ನಡೆಯುತ್ತಿರುವ ಬಗ್ಗೆ ಹಲವು ಬಂಗಾರದ ಅಂಗಡಿ ಮಾಲೀಕರು ಆತಂಕ ವ್ಯಕ್ತಪಡಿಸಿದ್ದಾರೆ.

ಕೆಲ ವ್ಯಕ್ತಿಗಳು ಬಂಗಾರದ ಅಂಗಡಿಗಳಿಗೆ ತೆರಳಿ, ''ನಾವು 10-15 ವರ್ಷಗಳ ಹಿಂದೆ ನಿಮ್ಮ ಅಂಗಡಿಯಲ್ಲಿ ಬಂಗಾರ ಅಡಮಾನ ಇಟ್ಟಿದ್ದೇವೆ. ಈಗ ಅದನ್ನು ಹಿಂದಿರುಗಿಸಿ. ಇಲ್ಲವಾದರೆ ಆಗ ಪಡೆದಿದ್ದ ₹5,000 ಅಥವಾ ₹10,000 ಸಾಲದ ಮೊತ್ತಕ್ಕೆ ಬಡ್ಡಿ ಸೇರಿಸಿ ಹಣ ನೀಡುತ್ತೇವೆ'' ಎಂದು ಹೇಳಿ ಅಂಗಡಿ ಮಾಲೀಕರ ಮೇಲೆ ಒತ್ತಡ ಹೇರುವ ಹಾಗೂ ಬೆದರಿಕೆ ಹಾಕುವ ಪ್ರಯತ್ನ ನಡೆಸುತ್ತಿರುವುದಾಗಿ ಆರೋಪಿಸಲಾಗಿದೆ.

ಪ್ರಸ್ತುತ ಬಂಗಾರದ ಬೆಲೆ ಒಂದು ತೊಲೆಗೆ ಸುಮಾರು ₹1.60 ಲಕ್ಷದವರೆಗೆ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಇಂತಹ ವಂಚನೆ ಪ್ರಕರಣಗಳು ಹೆಚ್ಚಾಗುತ್ತಿವೆ ಎನ್ನಲಾಗಿದೆ. ಈ ರೀತಿಯ ಘಟನೆಗಳು ರಾಜ್ಯದ ಇತರೆ ಜಿಲ್ಲೆಗಳಲ್ಲಿಯೂ ವರದಿಯಾಗಿದ್ದರೆ, ಇದೀಗ ರಾಯಚೂರು ಜಿಲ್ಲೆಯಲ್ಲಿಯೂ ಇಂತಹ ಪ್ರಕರಣಗಳು ಬೆಳಕಿಗೆ ಬರುತ್ತಿರುವುದು ಬಂಗಾರದ ವ್ಯಾಪಾರಿಗಳಲ್ಲಿ ಆತಂಕ ಮೂಡಿಸಿದೆ.

3ನೇ ಪುಟ.....

ಕಾವ್ಯ ಸಮಾಜ ಪರಿವರ್ತನೆಯ ಶಕ್ತಿ: ಶ್ರೀ ಅಜ್ಜೇಂದ್ರ ಸ್ವಾಮೀಜಿ



ಕಲಬುರಗಿ,ಜೂ.01-

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಹಾಗೂ ತಾಲೂಕು ಘಟಕಗಳ ಆಶ್ರಯದಲ್ಲಿ ನಗರದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ರವಿವಾರ ಆಯೋಜಿಸಲಾದ ಕಲಬುರಗಿ ಜಿಲ್ಲಾ ಪ್ರಥಮ ಕವಿ ಸಮ್ಮೇಳನ ಸಾಹಿತ್ಯಾಸಕ್ತರ ಭರ್ಜರಿ ಭಾಗವಹಿಸುವಿಕೆಯಿಂದ ಅದ್ದೂರಿಯಾಗಿ ಯಶಸ್ವಿಯಾಯಿತು.

ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಏಕದಂಡಿಗಿ ಮಠದ ಶ್ರೀ ಅಜ್ಜೇಂದ್ರ ಸ್ವಾಮೀಜಿ, ಕಾವ್ಯವು ಕೇವಲ ಮನರಂಜನೆಗೆ ಸೀಮಿತವಾಗದೆ ಸಮಾಜದಲ್ಲಿ ಚಿಂತನೆ ಮೂಡಿಸುವ ಶಕ್ತಿಯನ್ನು ಹೊಂದಿದೆ ಎಂದು ಹೇಳಿದರು.

ಒಂದು ಕಾವ್ಯ ಮನಸ್ಸನ್ನು ಸೆಳೆಯುತ್ತದೆ, ಇನ್ನೊಂದು ಕಾವ್ಯ ಚಿಂತನೆಗೆ ಹಚ್ಚುತ್ತದೆ. ಇಂದಿನ ಸಮಾಜಕ್ಕೆ ಚಿಂತನಾರ್ಹ ಕಾವ್ಯಗಳ ಅವಶ್ಯಕತೆ ಹೆಚ್ಚಾಗಿದೆ. ಹೊಸ ಕವಿ ಸಮ್ಮೇಳನಗಳಿಗೆ ಕಸಾಪ ನಾಂದಿ ಹಾಡುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ನರಸಿಂಗರಾವ ಹೇಮನೂರ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗವು ಸಮೃದ್ಧ ಕಾವ್ಯ ಪರಂಪರೆಯನ್ನು ಹೊಂದಿದ್ದು, ಜಿಲ್ಲೆಯ ಪ್ರಮುಖ ಸಾಹಿತಿಗಳ ಹೆಸರಿನಲ್ಲಿ ಸಾಂಸ್ಕೃತಿಕ ಪ್ರತಿಷ್ಠಾನಗಳನ್ನು ಸ್ಥಾಪಿಸಬೇಕೆಂದು ಒತ್ತಾಯಿಸಿದರು.

ಡಾ. ಚೆನ್ನಣ್ಣ ವಾಲೀಕಾರ, ಪ್ರೊ. ವಸಂತ ಕುಷ್ಟಗಿ ಹಾಗೂ ಗೀತಾ ನಾಗಭೂಷಣ ಅವರ ಹೆಸರಿನಲ್ಲಿ ಪ್ರತಿಷ್ಠಾನಗಳು ಹಾಗೂ ಪ್ರಶಸ್ತಿಗಳನ್ನು ಸ್ಥಾಪಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದರು.

ಈ ಭಾಗದ ಕವಿ-ಕಲಾವಿದರಿಗೆ ಸೂಕ್ತ ಅವಕಾಶಗಳು ದೊರೆಯುತ್ತಿಲ್ಲ ಎಂಬ ಬೇಸರ ವ್ಯಕ್ತಪಡಿಸಿದ ಅವರು, ರಾಷ್ಟ್ರಕವಿ ಗೌರವ ಪುರಸ್ಕಾರವನ್ನು ಮುಂದುವರಿಸಬೇಕು, ಜಿಲ್ಲೆಯ ಸಾಹಿತಿಗಳ ಕೃತಿಗಳನ್ನು ಕನ್ನಡ ಪುಸ್ತಕ ಪ್ರಾಧಿಕಾರ ಖರೀದಿಸಿ ಪ್ರೋತ್ಸಾಹಿಸಬೇಕು ಹಾಗೂ ಜನಪದ ಸಾಹಿತ್ಯವನ್ನು ಸಂಗ್ರಹಿಸಿ ಮುಂದಿನ ಪೀಳಿಗೆಗೆ ಉಳಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಕವಿ ಮತ್ತು ಲೇಖಕರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ನಿರಂತರ ಸಾಹಿತ್ಯ ಸಮ್ಮೇಳನಗಳನ್ನು ಆಯೋಜಿಸಿ ಪ್ರತಿಭೆಗಳನ್ನು ಗುರುತಿಸಿ ಗೌರವಿಸಬೇಕು ಎಂದ ಅವರು, ಸಾಹಿತ್ಯ, ಸಂಗೀತ, ಕಲೆ ಹಾಗೂ ಸಾಂಸ್ಕೃತಿಕ ಕ್ಷೇತ್ರದ ಸಾಧಕರ ಕುರಿತು ಕೃತಿಸಂಪುಟಗಳನ್ನು ಪ್ರಕಟಿಸುವಂತೆ ಪರಿಷತ್ತಿಗೆ ಮನವಿ ಮಾಡಿದರು.

ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ, ಕನ್ನಡ ಭಾಷೆ ಮತ್ತು ಸಾಹಿತ್ಯವು ಭವ್ಯವಾದ ಸಂಸ್ಕೃತಿ ಹಾಗೂ ಪರಂಪರೆಯನ್ನು ಹೊಂದಿದೆ ಎಂದರು. ಸಕಲ ಜೀವಾತ್ಮರ ಒಳಿತನ್ನು ಬಯಸುವುದೇ ಕನ್ನಡದ ಜೀವಾಳ. ಮುಂದಿನ ದಿನಗಳಲ್ಲಿ ಮತ್ತೊಂದು ಜಿಲ್ಲಾ ಸಾಹಿತ್ಯ ಸಮ್ಮೇಳನ ಸೇರಿದಂತೆ ಮೂರು ವಿಶೇಷ ಸಮ್ಮೇಳನಗಳನ್ನು ಆಯೋಜಿಸುವ ಉತ್ಸಾಹದಲ್ಲಿದ್ದೇವೆ ಎಂದು ತಿಳಿಸಿದರು.

ಹಿರಿಯ ಸಾಹಿತಿ ಡಾ. ಸ್ವಾಮಿರಾವ ಕುಲಕರ್ಣಿ ಮಾತನಾಡಿ, ಜಿಲ್ಲೆಯ ಕಾವ್ಯ ಪರಂಪರೆಗೆ ವಿಶಿಷ್ಟ ಸ್ಥಾನವಿದ್ದು, ಶರಣರ ವಚನಗಳು, ದಾಸರ ಪದಗಳು ಹಾಗೂ ಅನುಭಾವ ಸಾಹಿತ್ಯವೇ ನಮ್ಮ ಕಾವ್ಯ ಪರಂಪರೆಯ ಶ್ರೀಮಂತಿಕೆಯ ಸಂಕೇತಗಳಾಗಿವೆ ಎಂದು ಹೇಳಿದರು.

ಕಾವ್ಯ ಗೌರವ ಪುರಸ್ಕಾರ ಪ್ರದಾನ:

ಕಾರ್ಯಕ್ರಮದಲ್ಲಿ ಸಾಹಿತ್ಯ ಕ್ಷೇತ್ರದ ಸಾಧಕರಾದ ಡಾ. ಜಗನ್ನಾಥ ತರನಳ್ಳಿ, ವೆಂಕಟೇಶ ಜನಾದ್ರಿ, ಮಲ್ಲಿನಾಥ ಆಲೇಗಾಂವ, ಮಲ್ಲಮ್ಮ ಕಾಳಗಿ, ಡಾ. ಪ್ರೇಮಾ ಅಪಚಂದ, ರಾಜೇಂದ್ರ ಝುಳಕಿ, ಡಾ. ನಾಗರಾಜ ಹೆಬ್ಬಾಳ, ಗಿರೀಶಗೌಡ ಇನಾಮದಾರ ಹಾಗೂ ಡಾ. ಮೀರಾಜ್ ಪಾಷಾ ಅವರಿಗೆ ಕಾವ್ಯ ಗೌರವ ಪುರಸ್ಕಾರ ನೀಡಿ ಸತ್ಕರಿಸಲಾಯಿತು.

ನಂತರ ನಡೆದ ಕಾವ್ಯ ರಸಗಂಗೆ ಮನವು ತೊಳೆದಂಗೆ ಗೋಷ್ಠಿ ಸಾಹಿತ್ಯಾಸಕ್ತರ ಗಮನ ಸೆಳೆಯಿತು. ಡಾ. ಅರುಣಕುಮಾರ ಲಗಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಡಾ. ಕಾವ್ಯಶ್ರೀ ಮಹಾಗಾಂವಕರ್ ಅವರು ಕಾವ್ಯ ಪರಂಪರೆ ಮತ್ತು ಪ್ರಸ್ತುತ ಸವಾಲುಗಳು ವಿಷಯದ ಕುರಿತು ಉಪನ್ಯಾಸ ನೀಡಿದರೆ, ಡಾ. ಲಕ್ಷ್ಮೀಕಾಂತ ಪಂಚಾಳ ಅವರು ಸಮ್ಮೇಳನಾಧ್ಯಕ್ಷರ ಬದುಕು-ಬರಹ ಕುರಿತು ಮಾತನಾಡಿದರು.

ಹಿರಿಯ ಸಾಹಿತಿ ಡಾ. ವಾಸುದೇವ ಸೇಡಂ ಅಧ್ಯಕ್ಷತೆಯಲ್ಲಿ ನಡೆದ ನುಡಿ ತೋರಣ ವಿಶೇಷ ಕವಿಗೋಷ್ಠಿಯಲ್ಲಿ ಜಿಲ್ಲೆಯ ಅನೇಕ ಕವಿಗಳು ಸಮಕಾಲೀನ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ವಿದ್ಯಮಾನಗಳ ಕುರಿತು ಕವನಗಳ ಮೂಲಕ ಬೆಳಕು ಚೆಲ್ಲಿದರು.

ಸಮಾರೋಪ ಭಾಷಣ ಮಾಡಿದ ಹಿರಿಯ ಸಾಹಿತಿ ಡಾ. ಶ್ರೀಶೈಲ ನಾಗರಾಳ ಅವರು, ಕಲಬುರಗಿ ಜಿಲ್ಲೆ ಕಾವ್ಯ ಪರಂಪರೆಯ ನೆಲೆಬೀಡಾಗಿದ್ದು, ಶ್ರೀವಿಜಯನ ಕವಿರಾಜಮಾರ್ಗದಿಂದ ಹಿಡಿದು ಶರಣರು, ಸಂತರು, ತತ್ವಪದಕಾರರು ಹಾಗೂ ಪಂಪ, ರನ್ನ, ಜನ್ನರಂತಹ ಮಹಾಕವಿಗಳ ಪರಂಪರೆಯನ್ನು ಹೊಂದಿದೆ ಎಂದು ಹೇಳಿದರು.

ಕಾವ್ಯವನ್ನು ಪ್ರೀತಿಸುವ ಹೃದಯವಂತಿಕೆ ಪ್ರತಿಯೊಬ್ಬರಲ್ಲೂ ಇರಬೇಕು. ಹಿರಿಯರ ಕಾವ್ಯಗಳನ್ನು ಆಸ್ವಾದಿಸಿ, ವಿಮರ್ಶಾತ್ಮಕವಾಗಿ ಅಧ್ಯಯನ ಮಾಡಬೇಕು. ಸಮಾಜ ಮತ್ತು ಮಾನವ ಹೃದಯವನ್ನು ಸ್ಪರ್ಶಿಸುವ ಕಾವ್ಯಗಳೇ ದೀರ್ಘಕಾಲ ಜೀವಂತವಾಗಿರುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಸಾಮಾಜಿಕ ಹೋರಾಟಗಾರ ಪಿಡ್ಡಪ್ಪ ಜಾಲಗಾರ ಸೇರಿದಂತೆ ಜಿಲ್ಲೆಯ ವಿವಿಧ ಕ್ಷೇತ್ರಗಳ ಸಾಧಕರಿಗೆ ಸೇವಾ ಗೌರವ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಸಾಹಿತ್ಯ ಪ್ರೇರಕ ಸಿದ್ರಾಮಯ್ಯ ಹಿರೇಮಠ, ತಾಲೂಕು ಕಸಾಪ ಅಧ್ಯಕ್ಷೆ ಶಿವಲೀಲಾ ಕಲಗುರ್ಕಿ, ಸ್ವಾಗತ ಸಮಿತಿ ಅಧ್ಯಕ್ಷ ಸುರೇಶ ಪಾಟೀಲ ಜೋಗೂರ, ಶಿವಾನಂದ ಹೊನಗುಂಟಿ, ರಾಜೇಶ್ವರಿ ಸಾಹು ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಮಾತನಾಡಿದರು. ಜಿಲ್ಲೆಯ ಅನೇಕ ಸಾಹಿತಿಗಳು, ಕವಿಗಳು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಸಮ್ಮೇಳನದಲ್ಲಿ ಭಾಗವಹಿಸಿದ್ದರು.



ಎಸ್‌ಐಆರ್ ವಿರುದ್ಧ ಹೊಸಪೇಟೆಯಲ್ಲಿ ಬೃಹತ್ ಪ್ರತಿಭಟನೆ: ಜನವಿರೋಧಿ ಕ್ರಮ ಕೈಬಿಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ

ವಿಜಯನಗರ,ಜೂ.01-

ಕರ್ನಾಟಕ ರಾಜ್ಯದ ಪ್ರಗತಿಪರ ಸಂಘಟನೆಗಳು ಮತ್ತು ಜಾತ್ಯಾತೀತ ಪಕ್ಷಗಳ ಒಕ್ಕೂಟದ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಹಾಗೂ ಕೇಂದ್ರ ಚುನಾವಣಾ ಆಯೋಗ ಜಾರಿಗೊಳಿಸುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ () ಕ್ರಮವನ್ನು ವಿರೋಧಿಸಿ ಶನಿವಾರ ಹೊಸಪೇಟೆ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ತಾಲೂಕು ಕಚೇರಿವರೆಗೆ ಪಾದಯಾತ್ರೆ ನಡೆಸಿದ ಪ್ರತಿಭಟನಾಕಾರರು, ನಂತರ ತಾಲೂಕು ದಂಡಾಧಿಕಾರಿಗಳ ಮೂಲಕ ಕೇಂದ್ರ ಚುನಾವಣಾ ಆಯೋಗ ಹಾಗೂ ಭಾರತ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಈ ವೇಳೆ ಪ್ರಕ್ರಿಯೆಯು ಜನವಿರೋಧಿ, ದಲಿತ, ಹಿಂದುಳಿದ ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ವಿರುದ್ಧದ ಕ್ರಮವಾಗಿದ್ದು, ಪ್ರಜಾಪ್ರಭುತ್ವ ಮತ್ತು ಸಂವಿಧಾನ ವಿರೋಧಿಯಾಗಿದೆ ಎಂದು ಆರೋಪಿಸಿ ಅದನ್ನು ತಕ್ಷಣ ಕೈಬಿಡುವಂತೆ ಆಗ್ರಹಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಸಾಹಿತಿ, ಚಿಂತಕ ಹಾಗೂ ಹೋರಾಟಗಾರ ಪೀರ್ ಭಾಷಾ, ದಲಿತ ಹೋರಾಟಗಾರ ಕರಿಯಪ್ಪ ಗುಡಿಮನಿ, ಮುನ್ನಿ ಕಾಸಿಂ, ವಕೀಲ ಹೆಚ್. ಮಹೇಶ್ ಹಾಗೂ ಬಣ್ಣದಮನೆ ಸೋಮಶೇಖರ್ ಮಾತನಾಡಿದರು. ಮತದಾನದ ಹಕ್ಕು ಸಂವಿಧಾನಾತ್ಮಕ ಹಕ್ಕಾಗಿದ್ದು, ಯಾವುದೇ ವರ್ಗದ ಜನರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಪ್ರಯತ್ನ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ನಂತರ ವಿಶಾಲ್ ಮ್ಯಾಸಾರ ಅವರು ಮನವಿ ಪತ್ರವನ್ನು ಓದಿ ತಹಶೀಲ್ದಾರ್ ಅವರಿಗೆ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ವಿಜಯನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಂಬಗಲ್ ರಾಮಕೃಷ್ಣ, ಜಿಲ್ಲಾ ಉಪಾಧ್ಯಕ್ಷ ಕೆ. ರಮೇಶ್, ಕಮಲಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ. ಖಾಜಾ ಹುಸೇನ್, ನಗರಸಭೆ ಸದಸ್ಯರಾದ ಹೆಚ್.ಕೆ. ಮಂಜುನಾಥ್, ಶ್ರೀಮತಿ ಮುನ್ನಿ ಕಾಸಿಂ, ಕನಕಮ್ಮ, ಮೊಹಮ್ಮದ್ ಗೌಸ್, ವಿ. ಹುಲುಗಪ್ಪ, ದಾದಾ ಖಲಂದರ್, ರೋಹಿಣಿ ವೆಂಕಟೇಶ್, ಪರಗಂಟಿ ಶೇಖರ್ ಸೇವಾದಳ ಜಿಲ್ಲಾ ಸಂಘಟಕ ಬಿ. ಮಾರೆಣ್ಣ, ಮಾಜಿ ಎಪಿಎಂಸಿ ಅಧ್ಯಕ್ಷ ಹೆಚ್. ಸೋಮಶೇಖರ್ ಕೊಟಗಿನಾಳ್ ಮಲ್ಲಿಕಾರ್ಜುನ, ಸಿ.ಆರ್. ಭರತ್ ಕುಮಾರ್ ಎನ್. ವೆಂಕಟೇಶ್, ಇಂದುಮತಿ, ಪಿ. ವೀರಾಂಜನೇಯ್ಯ, ಸಣ್ಣ ಈರಣ್ಣ, ವಿಜಯಕುಮಾರ್ ಲಿಂಗಣ್ಣ ನಾಯಕ, ವೆಂಕಟೇಶ್ವರಲು, ಸಣ್ಣ ಮಾರೆಪ್ಪ, ಎಸ್.ಬಿ. ಮಂಜುನಾಥ್, ಶೇಖ್ ತಾಜುದ್ದೀನ್, ಕೆ. ಇಮ್ತಿಯಾಜ್, ಜೆ. ಶಿವಕುಮಾರ್ ರಾಮಾಂಜಿನಿ, ಕೆ.ಎಸ್. ದಾದಾಪೀರ್ ರಾಮಚಂದ್ರ, ಬಾಬು ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳು, ರೈತ ಸಂಘಟನೆಗಳು, ದಲಿತಪರ ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ಪ್ರತಿಭಟನೆಯು ಶಾಂತಿಯುತವಾಗಿ ನಡೆದಿದ್ದು, ಪ್ರಜಾಪ್ರಭುತ್ವ ಮತ್ತು ಮತದಾನದ ಹಕ್ಕುಗಳನ್ನು ರಕ್ಷಿಸಲು ಜನತೆ ಸಂಘಟಿತರಾಗಬೇಕೆಂದು ಮುಖಂಡರು ಕರೆ ನೀಡಿದರು.



ಮಲ್ಲಾಬಾದ್ ಏತ ನೀರಾವರಿ ಯೋಜನೆಯ ಪರಿಹಾರದಲ್ಲಿ ಅನ್ಯಾಯ ಖಂಡಿಸಿ ಜೂನ್ 9ರಂದು ಹೋರಾಟ: ಡಾ.ಮಹೇಶಕುಮಾರ್ ರಾಠೋಡ

ಕಲಬುರಗಿ,ಜೂ.01-

ಮಲ್ಲಾಬಾದ್ ಏತ ನೀರಾವರಿ ಯೋಜನೆಯ 2ನೇ ಹಂತದ ಪರಿಹಾರ ನೀಡುವಲ್ಲಿ ರೈತರಿಗೆ ಅನ್ಯಾಯವಾದರೆ ಜೂನ್ 9ರಂದು ಜೇವರ್ಗಿಯಲ್ಲಿ ಬೃಹತ್ ಹೋರಾಟ ರೂಪಿಸಲಾಗುವುದು ಎಂದು ಮಲ್ಲಾಬಾದ್ ಏತ ನೀರಾವರಿ ರೈತ ಹೋರಾಟ ಸಮಿತಿ ಮುಖಂಡ ಡಾ.ಮಹೇಶಕುಮಾರ್ ರಾಠೋಡ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಜೇವರ್ಗಿ ಮತ್ತು ಯಡ್ರಾಮಿ ತಾಲೂಕಿನ ರೈತರ ಬಹುದಿನದ ಬೇಡಿಕೆಯಾಗಿರುವ ಮಲ್ಲಾಬಾದ್ ಏತ ನೀರಾವರಿ ಯೋಜನೆಯ ಕಾಮಗಾರಿ ಆರಂಭವಾಗಿರುವುದನ್ನು ಸ್ವಾಗತಿಸುತ್ತೇವೆ. ಆದರೆ, ಯೋಜನೆಯ ನೆಪದಲ್ಲಿ ಗುತ್ತಿಗೆದಾರರು ಭೂಸ್ವಾಧೀನ ಕಾನೂನುಗಳನ್ನು ಗಾಳಿಗೆ ತೂರಿ, ರೈತರಿಗೆ ಸೂಕ್ತ ಪರಿಹಾರ ನೀಡದೆ ಏಕಪಕ್ಷೀಯವಾಗಿ ಕಾಮಗಾರಿ ನಡೆಸುತ್ತಿರುವುದು ಸರಿಯಲ್ಲ ಎಂದರು.

ಪರಿಹಾರ ನೀಡದೆ ಭೂಮಿ ಸ್ವಾಧೀನಪಡಿಸಿಕೊಳ್ಳುವಂತಿಲ್ಲ ಎಂಬ ಕರ್ನಾಟಕ ಹೈಕೋರ್ಟ್ ಆದೇಶ ಇದೆ ಮತ್ತು ರೈತರ ಭೂಮಿ ವಶಪಡಿಸಿಕೊಳ್ಳುವಾಗ ಕಾಯ್ದೆಯನ್ವಯ ಸಾಮಾಜಿಕ ಪರಿಣಾಮದ ಅಧ್ಯಯನ, ಸಾರ್ವಜನಿಕ ವಿಚಾರಣೆ ಮತ್ತು ನ್ಯಾಯಸಮ್ಮತ ಪರಿಹಾರ ಕಲ್ಪಿಸುವುದು ಕಡ್ಡಾಯ ಎಂಬ ನಿಯಮವೂ ಇದೆ. ಆದರೆ,ಇಲ್ಲಿನ ಅಧಿಕಾರಿಗಳು ಎಲ್ಲವನ್ನೂ ಗಾಳಿಗೆ ತೂರಿದ್ದಾರೆ ಎಂದು ಆರೋಪಿಸಿದರು.

ಅಧಿಕಾರಿಗಳು ರೈತರಿಗೆ ನೋಟಿಸ್ ನೀಡಿ ಅವರ ಸಮ್ಮುಖದಲ್ಲಿ ಸರ್ವೇ ಮಾಡಿ ಕಾಮಗಾರಿ ಮಾಡದೆ ಏಕಪಕ್ಷೀಯವಾಗಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ದೂರಿದರು.

ಜೇವರ್ಗಿ ಮತ್ತು ಯಡ್ರಾಮಿ ತಹಸೀಲ್ದಾರರು ಕೂಡಲೇ ರೈತ ಮುಖಂಡರ ಸಭೆ ಕರೆದು ಸಮಸ್ಯೆಗಳನ್ನು ಬಗೆಹರಿಸಬೇಕು. ಭೂಸ್ವಾಧೀನ ಕಾಯ್ದೆ-2013ರ ಅನ್ವಯ ಮಾರುಕಟ್ಟೆ ದರ, ಬೆಳೆ ಪರಿಹಾರ, ಮರಗಳ ಪರಿಹಾರ ಹಾಗೂ ಬೋರ್‌ವೆಲ್/ಪಂಪ್‌ಸೆಟ್‌ಗಳಿಗೆ ಸೂಕ್ತ ಪರಿಹಾರ ನೀಡಬೇಕು. ಯೋಜನೆ ಕುರಿತ ಮಾಹಿತಿಗಳನ್ನು ರೈತರಿಗೆ ಪಾರದರ್ಶಕವಾಗಿ ತಿಳಿಸಬೇಕು ಎಂದು ಒತ್ತಾಯಿಸಿದರು.

ಒಂದು ವೇಳೆ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ಸಭೆ ಕರೆಯದಿದ್ದರೆ ಮತ್ತು ರೈತರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ, ಜೂ.9ರಂದು ಜೇವರ್ಗಿಯಲ್ಲಿ ಬೃಹತ್ ಮಟ್ಟದ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಇಬ್ರಾಹಿಂ ಪಟೇಲ್ ಯಾಳವಾರ, ಬಾಬು ಪಾಟೀಲ, ಸಾಜಿದ್ ಅಹ್ಮದ್, ರಾಜಾ ಪಟೇಲ ಯಾಳವಾರ, ಅಜೀಜ್ ಪಟೇಲ್, ಮಹಮ್ಮದ್ ಚೌದರಿ ಕೊಡಚಿ, ಇತರರಿದ್ದರು.

ಎಸ್‌ಐಆರ್ ರದ್ದುಗೊಳಿಸಲು ಆಗ್ರಹಿಸಿ ಬೃಹತ್ ಪ್ರತಿಭಟನೆ



ಬೀದರ್,ಜೂ.01-

ಮತದಾರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯನ್ನು (ಎಸ್‌ಐಆರ್) ವಿರೋಧಿಸಿ ನಗರದಲ್ಲಿ ಎದ್ದೇಳು ಕರ್ನಾಟಕ ಸಂಘಟನೆ, ಎಸ್‌ಐಆರ್ ವಿರೋಧಿ ಕರ್ನಾಟಕ, ಪ್ರಗತಿಪರ ಹಾಗೂ ಜಾತ್ಯಾತೀತ ಪಕ್ಷಗಳ ಒಕ್ಕೂಟದಿಂದ ಶನಿವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಡಾ.ಅಂಬೇಡ್ಕರ್ ವೃತ್ತದಲ್ಲಿ ಸಮಾವೇಶ ನಡೆಸಿ ಮುಖಂಡರು ಮಾತನಾಡಿ, ಎಸ್‌ಐಆರ್ ರದ್ದುಗೊಳಿಸಬೇಕು ಎಂದು ಆಗ್ರಹಿಸಿದರು. ಬಳಿಕ ಪ್ರತಿಭಟನಾ ಮೆರವಣಿಗೆ ಮುಖಾಂತರ ಸಹಾಯಕ ಆಯುಕ್ತ ಕಚೇರಿಗೆ ತೆರಳಿ, ಸಹಾಯಕ ಆಯುಕ್ತರ ಮೂಲಕ ಮುಖ್ಯಮಂತ್ರಿ ಹಾಗೂ ರಾಜ್ಯ ಚುನಾವಣಾಧಿಕಾರಿಗೆ ಹಕ್ಕೊತ್ತಾಯ ಪತ್ರ ಸಲ್ಲಿಸಿದರು.

ಮನವಿ ಪತ್ರದಲ್ಲಿ, ಎಸ್‌ಐಆರ್ ಎಂಬುದು ಅಸಂವಿಧಾನಿಕ, ಅವೈಜ್ಞಾನಿಕ, ದೋಷಪೂರಿತ ಹಾಗೂ ದುರುದ್ದೇಶಪೂರಿತ ಮತದಾರರ ಪಟ್ಟಿಯ ಪರಿಷ್ಕರಣಾ ಪ್ರಕ್ರಿಯೆಯಾಗಿದೆ. ಸಾಮಾನ್ಯ ಮತದಾರರ ಹಕ್ಕುಗಳನ್ನು ಕಸಿಯುವ ಪ್ರಯತ್ನ ನಡೆಯುತ್ತಿದೆ. ಮತದಾರರ ಪಟ್ಟಿಯ ಪರಿಷ್ಕರಣೆ ಹೆಸರಿನಲ್ಲಿ ಬಡವರು, ಕಾರ್ಮಿಕರು, ಗ್ರಾಮೀಣ ಪ್ರದೇಶದ ಜನರು, ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳ ಮತದಾನದ ಹಕ್ಕುಗಳನ್ನು ದುರ್ಬಲಗೊಳಿಸುವ ಸಂಚು ನಡೆಯುತ್ತಿದೆ. ಸರ್ಕಾರ ಹಾಗೂ ಚುನಾವಣಾ ಆಯೋಗವು ಜನರಲ್ಲಿ ಗೊಂದಲ ಸೃಷ್ಟಿಸುವ ಬದಲು ಪಾರದರ್ಶಕ ಮತ್ತು ಸಂವಿಧಾನಬದ್ಧ ವಿಧಾನಗಳನ್ನು ಅನುಸರಿಸಬೇಕು ಎಂದು ಆಗ್ರಹಿಸಲಾಗಿದೆ.

ಸಂವಿಧಾನ, ಪ್ರಜಾತಂತ್ರ ವಿರೋಧಿ, ಜನ ವಿರೋಧಿಯಾದ ಎಸ್‌ಐಆರ್ ರದ್ದಾಗಬೇಕು. ಸಂವಿಧಾನಬದ್ಧ ಹಾಗೂ ಜನಸ್ನೇಹಿಯಾದ ಐಆರ್ ಜಾರಿಗೆ ತರಬೇಕು. ಲಾಜಿಕಲ್ ಡಿಸ್ಕ್ರಿಪೆನ್ಸಿ ಎನ್ನುವ ಅವೈಜ್ಞಾನಿಕ, ಅಪಾರದರ್ಶಕ ವಿಧಾನವನ್ನು ಕರ್ನಾಟಕದಲ್ಲಿ ಯಾವುದೇ ಕಾರಣಕ್ಕೂ ಅಳವಡಿಸಬಾರದು. ಜನವಿರೋಧಿ ಎಸ್‌ಐಆರ್ ವಿರುದ್ಧ ಸರ್ಕಾರವು ದಿಟ್ಟ ನಿಲುವು ತಾಳಬೇಕು ಎಂದು ಒತ್ತಾಯಿಸಲಾಗಿದೆ.

ಪ್ರಸ್ತುತ ಸ್ವರೂಪದ ಎಸ್‌ಐಆರ್ ಅನ್ನು ಒಪ್ಪುವುದಿಲ್ಲ ಎಂದು ಕರ್ನಾಟಕ ಸರ್ಕಾರ ಘೋಷಿಸಬೇಕು. ಕ್ಷುಲ್ಲಕ ವಿಚಾರಗಳು ಇಟ್ಟುಕೊಂಡು ಮತದಾನದ ಹಕ್ಕಿನಿಂದ ಯಾರನ್ನೇ ಹೊರಗಿಡುವುದು ಅಕ್ಷಮ್ಯ ಅಪರಾಧವಾಗಿದೆ. ಕರಡು ಪಟ್ಟಿ ತಯಾರಾದ ನಂತರ ಯಾರ ಮತವನ್ನಾದರೂ ಸುಲಭವಾಗಿ ಹುಡುಕಬಹುದಾದ ರೀತಿಯಲ್ಲಿ ನೀಡಬೇಕು ಎಂದು ತಿಳಿಸಲಾಗಿದೆ. ಮತದಾರರ ಪಟ್ಟಿಯನ್ನು ಅಂತಿಮಗೊಳಿಸುವ ಮುನ್ನ ಪ್ರತಿ ಗ್ರಾಮ ಪಂಚಾಯಿತಿ ಮತ್ತು ವಾರ್ಡ್ ಪ್ರದೇಶಗಳಲ್ಲಿ ಆ ಭಾಗದ ಮತದಾರರ ಕರಡು ಪಟ್ಟಿಯನ್ನು ಬಹಿರಂಗವಾಗಿ ಪ್ರಕಟಿಸಿ, ಸಾರ್ವಜನಿಕ ಪರಿಶೀಲನೆಗೆ ಒಳಪಡಿಸಬೇಕು. ಈ ಪ್ರಕ್ರಿಯೆಯನ್ನು ಗಡಿಬಿಡಿಯಲ್ಲಿ ನಡೆಸದೆ, ಕನಿಷ್ಟ ಒಂದು ವರ್ಷಗಳ ಅವಧಿ ನಿಗದಿ ಮಾಡಬೇಕು. ವಿವಾಹಿತ ಮಹಿಳೆಯರು, ವಲಸೆ ಕಾರ್ಮಿಕರು, ವಿದ್ಯಾರ್ಥಿಗಳು ಅಲೆಮಾರಿಗಳು, ಆದಿವಾಸಿಗಳು, ದಲಿತರು, ಬಡ ಅಲ್ಪಸಂಖ್ಯಾತರು ಮುಂತಾದ ದಾಖಲೆಗಳ ಗಂಭೀರ ಸಮಸ್ಯೆ ಎದುರಿಸುತ್ತಿರುವ ಜನ ವರ್ಗಗಳು ಪ್ರಜಾತಾಂತ್ರಿಕ ಪ್ರಕ್ರಿಯೆಯಿಂದ ವಂಚಿತರಾಗದಂತೆ ಒಳಗೊಳ್ಳಲು ಅವರಿಗಾಗಿ ವಿಶೇಷ ಸರಳ ಕ್ರಮಗಳನ್ನು ರೂಪಿಸಬೇಕು ಎಂದು ಬೇಡಿಕೆ ಇಡಲಾಗಿದೆ.

ಚೆಕ್ ಮೇಟ್ ಪಟ್ಟಿ ತಯಾರಿಸಬೇಕು. ವೈಜ್ಞಾನಿಕ ಹಾಗೂ ಜನಸ್ನೇಹಿ ವಿಧಾನವನ್ನು ಬಳಸಿ ರಾಜ್ಯ ಚುನಾವಣಾ ಆಯೋಗದ ಮೂಲಕ ಸ್ಥಳೀಯ ಸಂಸ್ಥೆಗಳಿಗಾಗಿ ತಯಾರಿಸಲಾಗುವ ರಾಜ್ಯ ಮತದಾರರ ಪಟ್ಟಿಯನ್ನು ಪರಿಷ್ಕರಿಸಬೇಕು. ವಿಶೇಷ ಗ್ರಾಮ ಸಭೆಗಳಲ್ಲಿ ಪರಿಶೀಲನೆಗೊಂಡು ಧೃಡಗೊಂಡ ಮತದಾರರಿಗೆ ಅವರ ದಾಖಲೆಗಳ ಸಮೇತ ಸ್ಮಾರ್ಟ್ ಕಾರ್ಡ್ ನೀಡಬೇಕು. ದಾಖಲೆ ಇಲ್ಲದವರಿಗೆ ವಾಸ ಧೃಡೀಕರಣ ಪತ್ರ ವನ್ನು ತಕ್ಷಣವೇ ವಿತರಿಸಬೇಕು. ಪ್ರತಿಯೊಂದು ಗ್ರಾಮ ಪಂಚಾಯಿತಿ ಮತ್ತು ವಾರ್ಡ್ ಪ್ರದೇಶಗಳಲ್ಲಿ ಮತದಾರರ ನೆರವು ಕೇಂದ್ರಗಳನ್ನು ತೆರೆಯಬೇಕು ಎಂದು ಆಗ್ರಹಿಸಲಾಗಿದೆ.

ನಮ್ಮ ಈ ಮೇಲಿನ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಪ್ರತಿಭಟನೆಯನ್ನು ರಾಜ್ಯಾದ್ಯಂತ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿಲಾಗಿದೆ.

ಈ ಸಂದರ್ಭದಲ್ಲಿ ಬಸವರಾಜ್ ಜಾಬಶೆಟ್ಟಿ, ಮಾರುತಿ ಬೌದ್ಧೆ, ಓಂಪ್ರಕಾಶ್ ರೊಟ್ಟೆ, ಮಹೇಶ್ ಗೊರನಾಳಕರ್ ಬಾಬುರಾವ್ ಹೊನ್ನಾ, ನಿಜಾಮುದ್ದೀನ್, ಅಮೃತರಾವ್ ಚಿಮಕೋಡೆ, ಜಗದೀಶ್ವರ್ ಬಿರಾದಾರ್ ಗೋಪಾಲ್ ಸಿಂಗ್ ಠಾಕೂರ್ ವಿನಯಕುಮಾರ್ ಮಾಳಗೆ, ಸಿದ್ದಪ್ಪ ಫುಲಾರಿ, ಹಣಮಂತ್ ಮಟ್ಟೆ, ಮಹ್ಮದ್ ಆಶಿಫುದ್ದೀನ್, ರಝಿಯಾ ಬಳಬಟ್ಟಿ, ಮುಬಸೀರ್ ಸಿಂಧೆ,

ಅಸ್ಮಾ ಸುಲ್ತಾನಾ, ಭೀಮ್ ಸಂಗಮ, ವಿಜಯಕುಮಾರ್ ಫಿರಾಸತ್ ಅಲಿ, ಮೌಲಾನಾ ಅಬ್ದುಲ್ ಗಫ್ಫಾರ್ ದುರ್ಗಪ್ಪ ಹಾಗೂ ರಾಮಪ್ಪ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

2028ರ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕಾದರೆ ಈಶ್ವರ್ ಖಂಡ್ರೆಗೆ ಡಿಸಿಎಂ, ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಲಿ



ಬೀದರ್,ಜೂ.01-

2028ರ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕಾದರೆ ಜೂ.3 ರಂದು ರಾಜ್ಯದಲ್ಲಿ ಹೊಸ ಸರ್ಕಾರ ಅಸ್ತಿತ್ವಕ್ಕೆ ಬರುತ್ತಿರುವ ಸರ್ಕಾರದಲ್ಲಿ ಈಶ್ವರ್ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಶಿವರಾಜ್ ಹಾಸನಕರ್ ಅವರು ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಈಶ್ವರ್ ಖಂಡ್ರೆ ಅವರು ಕಾಂಗ್ರೆಸ್ ನ ಧೀಮಂತ ನಾಯಕರಾಗಿದ್ದಾರೆ. ಕಾಂಗ್ರೆಸ್ ಪಕ್ಷಕ್ಕಾಗಿ ಅವರು ಅಪಾರವಾದ ಕೊಡುಗೆ ನೀಡಿದ್ದು, ರಾಜ್ಯಾದ್ಯಂತ ತನ್ನದೇಯಾದ ಛಾಪು ಮೂಡಿಸಿದ್ದಾರೆ ಎಂದರು.

ಈಶ್ವರ್ ಖಂಡ್ರೆ ಅವರು ಎರಡು ದಶಕಗಳ ಕಾಲ ನಾಲ್ಕು ಬಾರಿ ಶಾಸಕರಾಗಿ, ಸಚಿವರಾಗಿ ಆಯ್ಕೆಯಾಗಿ ಅನೇಕ ಜನಪರ ಕೆಲಸಗಳು ಮಾಡಿದ್ದಾರೆ. ಹಾಗೆಯೇ ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷರಾಗಿಯೂ ಅವರು ಕೆಲಸ ಮಾಡಿದ್ದಾರೆ. ಎಲ್ಲ ಜಾತಿ ಜನಾಂಗದ ಜನರಿಗೆ ತಮ್ಮ ಜೊತೆಗೆ ತೆಗೆದುಕೊಂಡು ಹೋಗುವ ಕೆಲಸ ಅವರು ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

ಜಾತ್ಯತೀತ ಸಿದ್ಧಾಂತದ ತತ್ವದ ಮೇಲೆ ಅಪಾರವಾದ ನಂಬಿಕೆ ಇಟ್ಟುಕೊಂಡಿರುವ ಈಶ್ವರ್ ಖಂಡ್ರೆ ಅವರು, ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಕೂಡ ನ್ಯಾಯ ಕೊಡಿಸುತ್ತಾರೆ. ಬರುವ 2028ರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕಾದರೆ ಈಶ್ವರ್ ಖಂಡ್ರೆ ಅವರನ್ನು ಡಿಸಿಎಂ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪಿ ಎಲ್ ಡಿ ಬ್ಯಾಕ್ ಅಧ್ಯಕ್ಷ ಮಡಿವಾಳಪ್ಪ ಮಂಗಲಗಿ, ನಿಸಾರ್ ಅಹಮ್ಮದ್, ಗುಂಡೆರಾವ್ ಪಾಟೀಲ್, ಮಹಮ್ಮದ್ ಖಾನ್, ಮುಸ್ತಾಕ್ ಅಹಮ್ಮದ್, ಪ್ರದೀಪ್ ನಾಟೆಕರ್ ಸೋನು ನಾಗಸೇನ್, ರಾಜಕುಮಾರ್ ಹಾಳೆ, ಮಲ್ಲಿಕಾರ್ಜುನ್ ಹಾಲಪುರ್ಗಾ ಹಾಗೂ ರಾಜಕುಮಾರ್ ನಾಯಕೋಡೆ ಸೇರಿದಂತೆ ಇತರರು ಇದ್ದರು.

ಶಿಕ್ಷಕರೇ ಧರೆಯ ಮೇಲಿನ ದೇವರು: ಮುಡುಬಿ ಗುಂಡೇರಾವ



ಸೇಡಂ,ಜೂ.01-

ಶಿಕ್ಷಕರೇ ಧರೆಯ ಮೇಲಿನ ದೇವರು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ನೀಡುವವರೇ ನಿಜವಾದ ಗುರುಗಳು ಎಂದು ಸಂಶೋಧಕ, ಸಾಹಿತಿ ಮುಡುಬಿ ಗುಂಡೇರಾವ ಹೇಳಿದರು. ಪಟ್ಟಣದ ಸರಕಾರಿ ನೌಕರರ ಭವನದಲ್ಲಿ ಮುಖ್ಯೋಪಾಧ್ಯಾಯಿನಿ ತಾರಾಬಾಯಿ ಅವರ ವಯೋನಿವೃತ್ತಿ ಅಂಗವಾಗಿ ಆಯೋಜಿಸಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಾರಾಬಾಯಿ ಅವರು ಹಾಬಾಳ (ಟಿ), ಯರಗೋಳ ಸೇರಿದಂತೆ ಹಲವು ಗ್ರಾಮಗಳ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕಿಯಾಗಿ ಹಾಗೂ ಮುಖ್ಯೋಪಾಧ್ಯಾಯಿನಿಯಾಗಿ ಮೂರುವರೆ ದಶಕಗಳ ಕಾಲ ಸೇವೆ ಸಲ್ಲಿಸಿ, ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಕೊಡುಗೆ ನೀಡಿದ್ದಾರೆ. ಅವರ ನಿಷ್ಠೆ, ಪ್ರಾಮಾಣಿಕತೆ ಹಾಗೂ ವಿದ್ಯಾರ್ಥಿಗಳ ಮೇಲಿನ ಕಾಳಜಿಯಿಂದ ಅವರು ಆದರ್ಶ ಶಿಕ್ಷಕಿಯಾಗಿ ಗುರುತಿಸಿಕೊಂಡಿದ್ದು, ಸಮಾಜ ಇಂದು ಅವರನ್ನು ಗೌರವಿಸುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕವಯತ್ರಿ ಜ್ಯೋತಿ ಎನ್. ಲಿಂಗಂಪಲ್ಲಿ, ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದುದು. ತಾರಾಬಾಯಿ ಅವರು ಪ್ರಶಸ್ತಿಗಳ ಹಿಂದೆ ಹೋಗದೆ ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿ ಶಿಕ್ಷಣ ಇಲಾಖೆ ಹಾಗೂ ಸಮಾಜಕ್ಕೆ ಗೌರವ ತಂದಿದ್ದಾರೆ. ಶಾಲಾ ಮಕ್ಕಳೇ ತಮ್ಮ ನಿಜವಾದ ಆಸ್ತಿ ಎಂಬ ಭಾವನೆಯೊಂದಿಗೆ ಸೇವೆ ಸಲ್ಲಿಸಿರುವ ಅವರ ಕಾರ್ಯ ಎಲ್ಲರಿಗೂ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿಗಳಾದ ಸವಿತಾ ಕೋಡ್ಲಾ ಸೇರಿದಂತೆ ಹಲವರು ಮಾತನಾಡಿ, ತಾರಾಬಾಯಿ ಸೇವಾ ಮನೋಭಾವ, ಶಿಸ್ತು ಮತ್ತು ವಿದ್ಯಾರ್ಥಿಗಳ ಮೇಲಿನ ಪ್ರೀತಿಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಸಕುಬಾಯಿ ರಾಮದಾಸ ಪವಾರ, ಸವಿತಾ ಕೋಡ್ಲಾ, ಲಕ್ಷ್ಮೀ ಯಾದಗೀರ, ವೆಂಕಟೇಶ ಚವ್ಹಾಣ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಜ್ಯೋತಿ ಲಿಂಗಂಪಲ್ಲಿ ಸಂಗೀತ ಗಾಯನ ನಡೆಸಿಕೊಟ್ಟರು. ವೆಂಕಟೇಶ ಸ್ವಾಗತಿಸಿದರು. ಶಿವಕುಮಾರ ಜುಲ್ಪಿ ಕಾರ್ಯಕ್ರಮ ನಿರೂಪಿಸಿದರು.

ವಯೋನಿವೃತ್ತಿ ಹೊಂದುತ್ತಿರುವ ತಾರಾಬಾಯಿ ಅವರನ್ನು ಸಮಾರಂಭದಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು.

ಒಂದನೇಯ ಪುಟದಿಂದ

ದೆಹಲಿಯಲ್ಲಿ ಡಿಕೆಶಿ ಮತ್ತು ಸಿದ್ದು: ಹೈಕಮಾಂಡ್ ನಾಯಕರ ಭೇಟಿ, ಸಂಪುಟ ರಚನೆ ಬಗ್ಗೆ ಚರ್ಚೆ!

ಮತ್ತು ಮಾಜಿ ಸಚಿವ ಸತೀಶ್ ಜಾರಕಿಹೊಳಿ ಈ ಹುದ್ದೆಗೆ ಮುಂಚೂಣಿಯಲ್ಲಿದ್ದಾರೆ ಎಂದು ಹೇಳಲಾಗುತ್ತಿದೆ. ಅವರು ಕೆಪಿಸಿಸಿ ಅಧ್ಯಕ್ಷ ಹುದ್ದೆಯ ಜೊತೆಗೆ ಕ್ಯಾಬಿನೆಟ್ ಸ್ಥಾನವನ್ನೂ ಬಯಸುತ್ತಿದ್ದಾರೆ ಎಂದು ವರದಿಯಾಗಿದೆ.

ನಿಯೋಜಿತ ಸಿಎಂ ನಿವಾಸದೆದುರು ಅಭಿಮಾನಿಗಳ ದಂಡು: ಇಂದು ಬೆಳಗ್ಗೆ ಡಿಕೆಶಿ ನಿವಾಸದೆದುರು ಅಭಿಮಾನಿಗಳ ದಂಡೇ ನೆರದಿತ್ತು. ತಮ್ಮ ನಿವಾಸದ ಬಾಲ್ಕನಿಯಲ್ಲಿ ಅಭಿಮಾನಿಗಳು, ಹಿತೈಸಿಗಳತ್ತ ಕೈ ಬೀಸಿದರು. ಬೆಂಬಲಿಗರು ಡಿ ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಲು ಅವರ ನಿವಾಸದೆದುರು ಭಾರಿ ಸಂಖ್ಯೆಯಲ್ಲಿ ಸೇರಿದ್ದರು.

ಅಗತ್ಯ ವಸ್ತುಗಳ ಬೆಲೆ ಏರಿಕೆ ನೀಟ್ ಪರೀಕ್ಷೆ ಹಗರಣದ ತನಿಖೆ ಚುರುಕುಗೊಳಿಸಿ ಯುವ ಕಾಂಗ್ರೆಸ್ ತಾಲೂಕು ಸಮಿತಿ ಒತ್ತಾಯ

ಏರಿಕೆ ಮತ್ತು ನೀಟ ಹಗರಣದ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಯುವ ಕಾಂಗ್ರೆಸ್ ತಾಲೂಕು ಸಮಿತಿ ವತಿಯಿಂದ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು .

ಈ ಸಂದರ್ಭದಲ್ಲಿ. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಹಾಗೂ ಯುವ ಕಾಂಗ್ರೆಸ್ ಸಮಿತಿ ತಾಲೂಕು ಕಾರ್ಯಕರ್ತರು ಅಭಿಮಾನಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಿಂಧನೂರಿನ ಕಾರುಣ್ಯ ಆಶ್ರಮದಲ್ಲಿ ಬಳ್ಳಾರಿಯ ಪಾತೂರಿ ಕುಟುಂಬದಿಂದ. ವಿಶ್ವ ಹಸಿವು ದಿನಾಚರಣೆ

ಸ್ವಾಮೀಜಿ ನಿಮ್ಮ ಕಾರ್ಯಾಗೀಯ ಅಷ್ಟೇ ಅಲ್ಲ ಕರ್ನಾಟಕದ ಎಲ್ಲಾ ಭಾಗದ ಜನರು ಆಶ್ರಮಕ್ಕೆ ಬಂದು ತಮಗೆ ಕೈಲಾದಷ್ಟು ಸಹಾಯವನ್ನು ಮಾಡಿ ಹೋಗಿರಬಹುದು. ಆದರೆ ವೃದ್ಧರಿಗೆ ನಿತ್ಯ ನಿರಂತರ ಉಪಚರಿಸುವ ಕಾರ್ಯ ಇದೆಯಲ್ಲ ಅದು ಅಷ್ಟು ಸರಳ ಕೆಲಸವಲ್ಲ. ಸ್ವಾಮೀಜಿಯವರು ಮಾತನಾಡುವ ಸಂದರ್ಭದಲ್ಲಿ ಒಂದು ಮಾತು ಹೇಳಿದರು ಸರ್ ಈ ಭೂಮಿ ಮೇಲೆ ಪ್ರತಿಯೊಬ್ಬ ಮಗ ತಂದೆ ತಾಯಿಗಳನ್ನು ಬಹಳ ಪ್ರೀತಿಯಿಂದ ಕೊನೆವರೆಗೆ ನೋಡಿಕೊಂಡರೆ ಈ ವೃದ್ಧಾಶ್ರಮಗಳ ಅವಶ್ಯಕತೆನೇ ಇರುವುದಿಲ್ಲ. ನಾನು ನನ್ನ ಮನೆಯಿಂದ ಏನನ್ನು ತೆಗೆದುಕೊಂಡು ಜನರು ಕೊಟ್ಟಿರುವುದನ್ನೇ ಜನಾರ್ದನ ಸೇವೆ ಎನ್ನುವ ರೂಪದಲ್ಲಿ ವೃದ್ಧರ ಸೇವೆ ಮಾಡುವ ಭಾಗ್ಯ ನನಗೆ ಆಗ ಭಗವಂತ ನೀಡಿದ್ದಾನೆ ಅಷ್ಟೇ ಸಾಕು ಇವತ್ತು 70 ಜನರನ್ನು ನಾನು ನನ್ನ ಆಶ್ರಮದಲ್ಲಿ ಸೇವೆಯನ್ನು ಮಾಡುತ್ತೇನೆ ಮುಂದೆ ಎಷ್ಟು ಜನರು ಬಂದರು ಅವರ ಸೇವೆಯನ್ನು ಸಂಪೂರ್ಣ ನನ್ನ ಕುಟುಂಬ ಸೇವೆಗೆ ಸಿದ್ದರಿದ್ದೇವೆ ಎನ್ನುವ ಇಂತಹ ನುಡಿಗಳು ಪ್ರತಿಯೊಬ್ಬರಿಗೆ ಆದರ್ಶವಾಗಲಿ. ಇಂತಹ ಪುಣ್ಯ ಕ್ಷೇತ್ರದಲ್ಲಿ ನಮ್ಮ ಪಾತೂರಿ ಕುಟುಂಬದ ಹಿರಿಯರ ಪುಣ್ಯಾರಾಧನೆ ಹಾಗೂ ಹಸಿವು ದಿನವನ್ನು ಆಚರಿಸುತ್ತಿರುವುದು ಸಮಾಜಕ್ಕೆ ಉತ್ತಮ ಸಂದೇಶವಾಗಿದೆ. ನಮ್ಮ ಪಾತೂರಿ ಕುಟುಂಬದ ಚಂದ್ರಶೇಖರ್ ಅವರು ಕೂಡ ನಿರಂತರ ತೆರೆಯ ಹಿಂದೆ ಹಲವಾರು ಸಮಾಜಪರ ಕಾರ್ಯಗಳನ್ನು ಮಾಡುತ್ತಿರುವುದು. ಮತ್ತು ನಾನು ಅವರ ಜೊತೆಯಲ್ಲಿ ಇರುವುದು ನಮ್ಮ ಪುಣ್ಯ ಎಂದು ಭಾವನಾತ್ಮಕವಾಗಿ ಮಾತನಾಡಿ ಹಲವಾರು ಸಂದೇಶಗಳನ್ನು ಹಂಚಿಕೊಂಡರು. ಈ ಕಾರ್ಯಕ್ರಮದಲ್ಲಿ ಪಾತೂರಿ ಚಂದ್ರಶೇಖರ್. ವಿಜಯ್ ಕುಮಾರ್. ನಾಗರತ್ನಂ ಪಾತೂರಿ. ವಸುಮತಿ ಪಾತೂರಿ. ಕೃಷ್ಣಮೂರ್ತಿ ಪಾತೂರಿ. ಪಾತೂರಿ ರಜಿನಿ. ಡಾಕ್ಟರ್ ನಾಗಮಣಿ ಪದ್ಮ ನರ್ಸಿಂಗ್ ಹೋಂ ಸಿಂಧನೂರ್. ಲಕ್ಷ್ಮಿ ತುಳಸಿ ಉಪನಂದನಾಧಿಕಾರಿಗಳು ಕಡೂರು. ಕೆ.ಗಂಗಾಧರ್ ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ. ಡಾಕ್ಟರ್ ಚನ್ನಬಸವ ಸ್ವಾಮಿ ಹಿರೇಮಠ. ಶ್ರೀ ಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ ಶರಣು ಸ್ವಾಮಿ. ಬಸವ ಸ್ವಾಮಿ ಹಾಗೂ ಪಾತೂರಿ ಕುಟುಂಬದ ಗುರುಹಿರಿಯರು ಮಕ್ಕಳು ಹಾಗೂ ಅನೇಕರು ಭಾಗವಹಿಸಿದ್ದರು.

ಇಬ್ಬರೂ ನಾಯಕರುಗಳ ಪ್ರತಿಷ್ಟೆ. ಯಾರು ಸಚಿವರು..? ಸಿಂಧನೂರು ಅಧಿಪತಿ ಯಾರು.. ಜನರಲ್ಲಿ ಕುತೂಹಲ!

ಎಂದು ಸಾರ್ವಜನಿಕರು ಮಾತು...!

ಆದರೆ ಇಲ್ಲಿಯೇ ನಾಯಕರುಗಳಿಗೆ ತಮ್ಮ ಪ್ರತಿಷ್ಠೆ ಮೇನ್ ಇಂಪಾರ್ಟೆಂಟ್ ಯಾಗಿ ಮಾರ್ಪಟ್ಟಿದೆ. ಐದು ದಶಕಗಳ ಕಾಲ ಶಾಸಕರಾಗಿ ತಾಲೂಕು ಅಭಿವೃದ್ಧಿ.ಜನರು ಸೇವೆ ಮಾಡಿಕೊಂಡು ಬಂದಿದ್ದೇವೆ ಎಂದು ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಅವರದು ಹಾಗೂ ಅವರು ಬೆಂಬಲಿಗರು ಮಾತು.ಇಲ್ಲಿ ಮಾಸ್ ಲೀಡರ್ ನಾವೇ ಎಂದು ಬೆಂಬಲಿಗರು ಮಾತುಗಳು ಕೇಳಿಬರುತ್ತಿದೆ....!

ನಿನ್ನೆ ಮೊನ್ನೆ .... ಬಂದವರು ಯಾವತ್ತೂ ಮಾಸ್ ಲೀಡರ್ ಆಗುವುದಕ್ಕೆ ಸಾಧ್ಯವೇ...? ಇನ್ನೂ ಕೆಲ ಬೆಂಬಲಿಗರಲ್ಲಿ ಮಾತುಗಳು ಕೇಳಿ ಬರುತ್ತಿವೆ. ಒಟ್ಟಾರೆ ದೇವರು ಮೊರೆ ಹೋಗಿರುವ ನಾಯಕರಿಗೆ ದೇವರ ಆಶೀರ್ವಾದ ಮಾಡಲಿದ್ದಾರೆ.... ?

ಮತ್ತು ಡಿ ಕೆ ಶಿವಕುಮಾರ್ ಅವರು ನೇತೃತ್ವದಲ್ಲಿ ಸಚಿವ ಸಂಪುಟದಲ್ಲಿ ಯಾರೂ ಸಚಿವರಾಗಿ ಸಿಂಧನೂರು ತಾಲೂಕಿನ ಅಧಿಪತಿ ಯಾಗಿ ಆಡಳಿತ ನಡೆಸುತ್ತಾರೆ ಕಾದು ನೋಡಬೇಕಾಗಿದೆ...!

ಸಿಂಧನೂರು ಅಧಿಪತಿ ಯಾರು.. ಜನರಲ್ಲಿ ಕುತೂಹಲ!

ಅಭ್ಯಾಸವಾಗಿದೆ. ಸಾರ್ವಜನಿಕರು ಆರೋಗ್ಯದ ಬಗ್ಗೆ ಜಾಗರೂಕರಾಗಿರಬೇಕು'' ಎಂದು ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಯಾದ ನಿಖಿಲ್ ಕುಮಾರ್ ಪಾಟೀಲ್ ತಿಳಿಸಿದ್ದಾರೆ.

ಬಂಗಾರದ ಬೆಲೆ ಏರಿಕೆ ನಡುವೆ ಹೊಸ ಸ್ಕ್ಯಾಮ್

ಹಳೆಯ ಅಡಮಾನ ವ್ಯವಹಾರಗಳ ದಾಖಲೆಗಳು ಲಭ್ಯವಿಲ್ಲದಿರುವುದನ್ನು ದುರುಪಯೋಗಪಡಿಸಿಕೊಂಡು ಕೆಲವರು ಸುಳ್ಳು ಹೇಳಿಕೊಂಡು ಬಂಗಾರ ಅಥವಾ ಹಣ ಪಡೆಯಲು ಯತ್ನಿಸುತ್ತಿದ್ದಾರೆ ಎಂಬ ಅನುಮಾನ ವ್ಯಕ್ತವಾಗಿದೆ. ಕೆಲವು ಪ್ರಕರಣಗಳಲ್ಲಿ ಅಂಗಡಿ ಮಾಲೀಕರಿಗೆ ಕಾನೂನು ಕ್ರಮದ ಹೆಸರಿನಲ್ಲಿ ಬೆದರಿಕೆ ಹಾಕಿ ಒತ್ತಡ ಸೃಷ್ಟಿಸುವ ಪ್ರಯತ್ನಗಳೂ ನಡೆದಿವೆ ಎಂದು ತಿಳಿದುಬಂದಿದೆ.

ವ್ಯಾಪಾರಿಗಳು ಮತ್ತು ಸಾರ್ವಜನಿಕರು ಈ ಕುರಿತು ಪೊಲೀಸ್ ಇಲಾಖೆ ಸಮಗ್ರ ತನಿಖೆ ನಡೆಸಿ, ವಂಚನೆಗೆ ಯತ್ನಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಅಲ್ಲದೆ, ಜಿಲ್ಲೆಯ ಬಂಗಾರದ ಅಂಗಡಿ ಮಾಲೀಕರು ತಮ್ಮ ಹಳೆಯ ಅಡಮಾನ ಹಾಗೂ ವ್ಯವಹಾರಗಳ ದಾಖಲೆಗಳನ್ನು ಸುರಕ್ಷಿತವಾಗಿ ಸಂರಕ್ಷಿಸಿಕೊಳ್ಳಬೇಕು. ಅನುಮಾನಾಸ್ಪದ ವ್ಯಕ್ತಿಗಳು ಅಥವಾ ವ್ಯವಹಾರಗಳ ಬಗ್ಗೆ ತಕ್ಷಣ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಲಾಗಿದೆ.

ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕ



ಲಿಂಗಸುಗೂರು,ಮೇ.31- ತಂಬಾಕು ಬಳಕೆಯಿಂದ ಕ್ಯಾನ್ಸರ ಹೃದಯಾಘಾತ, ರಕ್ತದೊತ್ತಡ, ಶ್ವಾಸಕೋಶ ಸಂಬಂಧಿ ಕಾಯಿಲೆಗಳು ಸೇರಿದಂತೆ ಅನೇಕ ಮಾರಕ ರೋಗಗಳು ಉಂಟಾಗು ತ್ತವೆ.ಯುವಕರು ತಂಬಾಕು ಹಾಗೂ ಇತರೆ ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದು ಅಧ್ಯಕ್ಷ ಸಂಜೀವಕುಮಾರ ಕಂದಗಲ್ ಹೇಳಿದರು.

ಪಟ್ಟಣದ ಶ್ರೀ ಸಂಜೀವ್ ಪಾಲಿಟೆಕ್ನಿಕ್ ಹಾಗೂ ಶ್ರೀ ಬಸಮ್ಮ ಗುರುಲಿಂಗಪ್ಪ ಕಾನೂನು ಮಹಾ ವಿದ್ಯಾಲಯದಲ್ಲಿ ವಿಶ್ವ ತಂಬಾಕು ದಿನಾಚರಣೆ ಕಾರ್ಯಕ್ರ ಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಹಾಗೂ ಯುವಕರು ವಿವಿಧ ರೀತಿಯ ವ್ಯಸನಗಳ ಆಕರ್ಷ ಣೆಗೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ತಂಬಾಕು ಸೇವನೆಯು ಆರಂಭದಲ್ಲಿ ಸಾಮಾನ್ಯ ಅಭ್ಯಾಸದಂತೆ ಕಂಡರೂ ನಂತರ ಅದು ಗಂಭೀರ ವ್ಯಸನವಾಗಿ ಮಾರ್ಪಟ್ಟು ವ್ಯಕ್ತಿಯ ದೈಹಿಕ, ಮಾನಸಿಕ ಹಾಗೂ ಆರ್ಥಿಕ ಸ್ಥಿತಿಯ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದು ತಿಳಿಸಿದರು.

ತಂಬಾಕು ಸೇವಿಸುವ ವ್ಯಕ್ತಿ ಮಾತ್ರವಲ್ಲದೆ ಆತನ ಸುತ್ತಮುತ್ತಲಿ ರುವವರ ಆರೋಗ್ಯದ ಮೇಲೂ ಪರಿಣಾಮ ಬೀರುತ್ತದೆ. ಪರೋಕ್ಷ ಧೂಮಪಾನದಿಂದ ಮಕ್ಕಳಲ್ಲಿ, ಮಹಿಳೆಯರಲ್ಲಿ ಹಾಗೂ ವಯೋವೃ ದ್ಧರಲ್ಲಿ ವಿವಿಧ ಆರೋಗ್ಯ ಸಮಸ್ಯೆ ಗಳು ಕಂಡುಬರುವ ಸಾಧ್ಯತೆಗಳಿವೆ. ಹೀಗಾಗಿ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲ ಅಮರೇಶ ಗೌಡೂರು, ಉಪನ್ಯಾಸಕರಾದ ವೆಂಕಟೇಶ ಪೂಜಾರಿ, ವೆಂಕಟೇಶ ಕವಿತಾಳ, ಚನ್ನಬಸವ, ಶಬ್ಬಿರಸಾಬ ಸೇರಿ ವಿದ್ಯಾರ್ಥಿಗಳು ಹಾಗೂ ಕಾಲೇಜಿನ ಸಿಬ್ಬಂದಿಗಳು ಇದ್ದರು.

ಬೀದರ್ ಎಸ್ಐಆರ್ ಪ್ರಕ್ರಿಯೆಯಲ್ಲಿ ಬದಲಾವಣೆ ಮಾಡಲು ಆಗ್ರಹಿಸಿ ಧರಣಿ



ಬೀದರ್, ಜೂ.01- ಮತದಾರರ ಪಟ್ಟಿಯಿಂದ ಒಬ್ಬ ಅರ್ಹ ಮತದಾರ ಹೊರಗುಳಿಯದಂತೆ ನೋಡಿಕೊಳ್ಳಲು ಎಸ್ಐಆರ್ ಪ್ರಕ್ರಿಯೆಯಲ್ಲಿ ಬದಲಾವಣೆ ಮಾಡಬೇಕು ಎಂದು ಆಗ್ರಹಿಸಿ ಬಸವಕಲ್ಯಾಣದಲ್ಲಿ ಶನಿವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಅಂಬೇಡ್ಕರ್ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರು, ಸಾರ್ವಜನಿಕರು ಭಾಗವಹಿಸಿ ಎಸ್ಐಆರ್ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರದಲ್ಲಿ ತಹಸೀಲ್ದಾರ್ ಅವರ ಮೂಲಕ ಮುಖ್ಯಮಂತ್ರಿ ಹಾಗೂ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಈ ಪ್ರಕ್ರಿಯೆ ವಿಶೇಷವಾಗಿ ಮಹಿಳೆ, ವಲಸೆ ಕಾರ್ಮಿಕ, ಅಲೆಮಾರಿ, ಆದಿವಾಸಿ, ದಮನಿತ ಸಮುದಾಯಗಳನ್ನು ಹಾಗೂ ಅಲ್ಪಸಂಖ್ಯಾತರನ್ನು ಬೃಹತ್ ಸಂಖ್ಯೆಯಲ್ಲಿ ಪ್ರಜಾತಾಂತ್ರಿಕ ಪ್ರಕ್ರಿಯೆಯಿಂದ ಹೊರದಬ್ಬುತ್ತಿದೆ. ಎಸ್ಐಆರ್ ಪ್ರಕ್ರಿಯೆ ಹೊರಹಾಕಿದವರಿಗೆ ಯಾವ ಸರ್ಕಾರಿ ಸೌಲಭ್ಯಗಳೂ ದೊರಕುವುದಿಲ್ಲ ಎಂದು ಬಿಜೆಪಿ ಆಡಳಿತರೂಢ ರಾಜ್ಯಗಳ ಮುಖ್ಯಮಂತ್ರಿಗಳು ಘೋಷಿಸುತ್ತಿದ್ದಾರೆ ಎಂದು ದೂರಲಾಗಿದೆ.

ಈಗಾಗಲೇ ಎಸ್ಐಆರ್ ನಡೆದ ರಾಜ್ಯಗಳಲ್ಲಿ ಇದುವರೆಗೆ 6.5 ಕೋಟಿ ಮತದಾರರನ್ನು ಮತ ಪಟ್ಟಿಯಿಂದ ತೆಗೆಯಲಾಗಿದೆ. ಇದರಲ್ಲಿ ಕನಿಷ್ಠ ಅರ್ಹ ಮತದಾರರು ಇದ್ದಾರೆ ಎಂಬುದು ಅನೇಕ ಅಧ್ಯಯನಗಳು ನಿರೂಪಿಸಿವೆ. ಪಶ್ಚಿಮ ಬಂಗಾಳದಲ್ಲಂತೂ ದಾಖಲೆಗಳಿದ್ದರೂ 27 ಲಕ್ಷ ಜನರಿಗೆ ಮತದಾನದ ಹಕ್ಕನ್ನು ನಿರಾಕರಿಸಿದ್ದು ಅಕ್ಷಮ್ಯ ಅಪರಾಧವಾಗಿದೆ. ಅಲ್ಲಿ ಬಳಸಲಾದ ಲಾಜಿಕಲ್ ಡಿಸ್ಕ್ರಿಪೆನ್ಸಿ ಸಾಫ್ಟ್ ವೇರ್ ಸೃಷ್ಟಿಸಿದ ಅವಾಂತರ ಹಾಗೂ ಅದರ ಹಿಂದಿನ ರಾಜಕೀಯ ದುರುದ್ದೇಶ ನ್ಯಾಯಾಂಗಕ್ಕೆ ಕಾಣದಿದ್ದರೂ ಇಡೀ ದೇಶದ ಜನರ ಕಣ್ಣಿಗೆ ನಿಚ್ಚಳವಾಗಿ ಗೋಚರಿಸಿದೆ ಎಂದು ತಿಳಿಸಲಾಗಿದೆ.

ಲಾಜಿಕಲ್ ಡಿಸ್ಕ್ರಿಪೆನ್ಸಿ ಎನ್ನುವ ಅತಂತ್ಯ ಅವೈಜ್ಞಾನಿಕ, ಅವಾಸ್ತವಿಕ, ಅಪಾರದರ್ಶಕ ಹಾಗೂ ದುರುದೇಶಪೂರಿತ ವಿಧಾನವನ್ನು ಕರ್ನಾಟಕದಲ್ಲಿ ಯಾವುದೇ ಕಾರಣಕ್ಕೂ ಅಳವಡಿಸಬಾರದು. ಯಾರ ಮತವನ್ನಾದರೂ ಸುಲಭವಾಗಿ ಹುಡುಕಬಹುದಾದ ರೀತಿಯಲ್ಲಿ, ಪಾರದರ್ಶಕತೆ ಇರುವ ರೀತಿಯಲ್ಲಿ ಅದನ್ನು 'ಕಂಪ್ಯೂಟರ್ ರೀಡಬಲ್ ಫಾರ್ಮ್ಯಾಟ್'ನಲ್ಲಿ ನೀಡಬೇಕು. ಮತದಾರರ ಪಟ್ಟಿಯನ್ನು ಅಂತಿಮಗೊಳಿಸುವ ಮುನ್ನ ಚುನಾವಣಾ ಆಯೋಗದ ಮ್ಯಾನುಯಲ್‌ನಲ್ಲಿ ಇರುವ ನಿಯಮವನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಒತ್ತಾಯಿಸಲಾಗಿದೆ.

ಪ್ರತಿ ಗ್ರಾಮ ಪಂಚಾಯಿತಿ ಮತ್ತು ವಾರ್ಡ್ ಪ್ರದೇಶಗಳಲ್ಲಿ ಆ ಭಾಗದ ಮತದಾರರ ಕರಡು ಪಟ್ಟಿಯನ್ನು ಬಹಿರಂಗವಾಗಿ ಪ್ರಕಟಿಸಿ, ಸಾರ್ವಜನಿಕ ಪರಿಶೀಲನೆಗೆ ಒಳಪಡಿಸಿ, ಮುಕ್ತವಾದ ರೀತಿಯಲ್ಲಿ, ಎಲ್ಲರ ಸಮ್ಮುಖದಲ್ಲಿ ತಿದ್ದುಪಡಿಗಳನ್ನು ಮಾಡಬೇಕು. ಈ ಪ್ರಕ್ರಿಯೆಯನ್ನು ಗಡಿಬಿಡಿಯಲ್ಲಿ ನಡೆಸದೆ, ಕನಿಷ್ಠ 1 ವರ್ಷಗಳ ಅವಧಿ ನಿಗದಿ ಮಾಡಬೇಕು. ವಿವಾಹಿತ ಮಹಿಳೆಯರು, ವಲಸೆ ಕಾರ್ಮಿಕರು, ವಿದ್ಯಾರ್ಥಿಗಳು ಅಲೆಮಾರಿಗಳು, ಆದಿವಾಸಿಗಳು, ದಲಿತರು, ಬಡ ಅಲ್ಪಸಂಖ್ಯಾತರು ಮುಂತಾದ ದಾಖಲೆಗಳ ಗಂಭೀರ ಸಮಸ್ಯೆ ಎದುರಿಸುತ್ತಿರುವ ಜನ ವರ್ಗಗಳು ಪ್ರಜಾತಾಂತ್ರಿಕ ಪ್ರಕ್ರಿಯೆಯಿಂದ ವಂಚಿತರಾಗದಂತೆ ಒಳಗೊಳ್ಳಲು ಅವರಿಗಾಗಿ ವಿಶೇಷ ಸರಳ ಕ್ರಮಗಳನ್ನು ರೂಪಿಸಬೇಕು ಎಂದು ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಎದ್ದೇಳು ಕರ್ನಾಟಕದ ಜಿಲ್ಲಾ ಸಂಯೋಜಕ ಸಂದೀಪ್ ಮುಕಿಂದೆ, ತಾಲೂಕು ಸಂಯೋಜಕ ಇಕ್ರಾಮ್ ಖಾದಿವಾಲೆ, ವಾಯ್ಸ್ ಆಫ್ ಅಂಬೇಡ್ಕರ್ ಸಂಘಟನೆಯ ಅಧ್ಯಕ್ಷ ಸುರೇಶ್ ಮೋರೆ, ಭೀಮ್ ಆರ್ಮಿ ಅಧ್ಯಕ್ಷ ಚೇತನ್ ಕಾಡೆ, ಯುಥ್ ಕಾಂಗ್ರೆಸ್ಸಿ ನ ನಗರಾಧ್ಯಕ್ಷ ಎಂ ಡಿ ಜಾಬೇರ್, ಯುವ ಮುಖಂಡ ರಿಯಾಜ್ ಪಟೇಲ್, ಜಮಾತ್-ಎ-ಇಸ್ಲಾಮಿ-ಹಿಂದ್ ಮುಖಂಡ ಇಫ್ತಿಕಾರ್ ಅಹಮದ್ ಸೇರಿದಂತೆ ಅನೇಕ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ದರ ಏರಿಕೆ ವಿರೋಧಿಸಿ ಪ್ರತಿಭಟನೆ



ಕಲಬುರಗಿ,ಜೂ.01- ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ಸೇರಿದಂತೆ ಇಂಧನ ದರಗಳಲ್ಲಿ ನಿರಂತರ ಏರಿಕೆ ಮಾಡುತ್ತಿರುವ ಕೇಂದ್ರ ಸರ್ಕಾರದ ಕ್ರಮವನ್ನು ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಎಸ್‌ಯುಸಿಐ(ಸಿ) ಕಲಬುರಗಿ ಜಿಲ್ಲಾ ಸಮಿತಿಯ ವತಿಯಿಂದ ನಗರದ ಎಸ್‌ವಿಪಿ ವೃತ್ತದ ಬಳಿ ರವಿವಾರ ಸಂಜೆ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಹಾಗೂ ಸಿಎನ್‌ಜಿ ದರ ಏರಿಕೆಯನ್ನು ತಕ್ಷಣ ಹಿಂಪಡೆಯುವಂತೆ ಒತ್ತಾಯಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಪಕ್ಷದ ಜಿಲ್ಲಾ ಕಾರ್ಯದರ್ಶಿ ಆರ್.ಕೆ. ವೀರ ಭದ್ರಪ್ಪ, ಪಶ್ಚಿಮ ಏಷ್ಯಾದಲ್ಲಿನ ಯುದ್ಧದ ಹಿನ್ನೆಲೆಯಲ್ಲಿ ಕಚ್ಚಾ ತೈಲದ ಬೆಲೆ ಏರಿಕೆಯಾಗಿದೆ ಎಂಬ ಕಾರಣವನ್ನು ಕೇಂದ್ರ ಸರ್ಕಾರ ನೀಡುತ್ತಿದೆ. ಆದರೆ ಯುದ್ಧ ಆರಂಭವಾದ ತಕ್ಷಣವೇ ದರ ಏರಿಕೆ ಮಾಡದೆ, ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ಬಳಿಕ ಇಂಧನ ದರಗಳನ್ನು ಹೆಚ್ಚಿಸಿರುವುದು ಸರ್ಕಾರದ ದ್ವಂದ್ವ ನೀತಿಯನ್ನು ಬಯಲಿಗೆಳೆಯುತ್ತದೆ ಎಂದು ಆರೋಪಿಸಿದರು. ಕೋವಿಡ್ ಅವಧಿ ಯಲ್ಲಿ ಹಾಗೂ ನಂತರ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಗಣನೀಯವಾಗಿ ಇಳಿಕೆಯಾಗಿದ್ದರೂ ಅದರ ಲಾಭವನ್ನು ಜನರಿಗೆ ನೀಡಲಿಲ್ಲ. ಅಲ್ಲದೆ ರಿಯಾಯಿತಿ ದರದಲ್ಲಿ ತೈಲ ಖರೀದಿಸಿದ ಸಂದರ್ಭಗಳಲ್ಲಿಯೂ ಇಂಧನ ದರ ಕಡಿತಗೊಳಿಸುವ ಬದಲು ಕೇಂದ್ರ ಸರ್ಕಾರ ಅಬಕಾರಿ ಸುಂಕವನ್ನು ಹೆಚ್ಚಿಸುವ ಮೂಲಕ ಜನರ ಮೇಲೆ ಹೆಚ್ಚುವರಿ ಹೊರೆ ಹಾಕಿದೆ ಎಂದು ಟೀಕಿಸಿದರು.

ಇಂಧನ ದರ ಏರಿಕೆಯಿಂದ ಜನಸಾಮಾನ್ಯರು, ಆಟೋ ಚಾಲಕರು, ಸಾರಿಗೆ ಕ್ಷೇತ್ರದ ಕಾರ್ಮಿಕರು, ಹೋಟೆಲ್ ಉದ್ಯಮಿಗಳು ಸೇರಿದಂತೆ ಎಲ್ಲಾ ವರ್ಗದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂಧನ ಬೆಲೆ ಹೆಚ್ಚಳದಿಂದ ಸಾರಿಗೆ ವೆಚ್ಚ ಏರಿಕೆಯಾಗುತ್ತಿದ್ದು, ಅದರ ಪರಿಣಾಮವಾಗಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗೂ ಹಣದುಬ್ಬರ ಹೆಚ್ಚಾಗುತ್ತಿದೆ ಎಂದು ಪ್ರತಿಭಟನಾಕಾರರು ಆತಂಕ ವ್ಯಕ್ತಪಡಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪರಸ್ಪರ ಆರೋಪ-ಪ್ರತ್ಯಾರೋಪಗಳಲ್ಲಿ ತೊಡಗುವ ಬದಲು ಇಂಧನ ಮೇಲಿನ ತೆರಿಗೆ ಭಾರವನ್ನು ಕಡಿಮೆ ಮಾಡಬೇಕು. ಜನರ ಹಿತದೃಷ್ಟಿಯಿಂದ ಪರ್ಯಾಯ ತೈಲ ಮೂಲಗಳ ಹುಡುಕಾಟಕ್ಕೆ ಮುಂದಾಗ ಬೇಕು ಎಂದು ಎಸ್‌ಯುಸಿಐ(ಸಿ) ಮುಖಂಡರು ಒತ್ತಾಯಿಸಿದರು. ಜಿಲ್ಲಾ ಸಮಿತಿಯ ಸದಸ್ಯರಾದ ಕಾ. ವಿ.ನಾಗಮ್ಮಾಳ್ ಇನ್ನಿತರರು ಮಾತನಾಡಿದರು.

ಪ್ರತಿಭಟನೆಯಲ್ಲಿ ಎಮ್. ಶಶಿಧರ ರಾಮಣ್ಣ ಇಬ್ರಾಹಿಂಪುರ, ಗಣಪತರಾವ ಮಾನೆ, ಎಸ್. ಎಮ್.ಶರ್ಮಾ, ಜಗನ್ನಾಥ ಎಸ್. ಎಚ್., ಮಹೇಶ ಎಸ್.ಬಿ, ರಾಘವೇಂದ್ರ ಎಮ್. ಜಿ, ರಾಧಾ, ವಿಶಾಲಾಕ್ಷಿ ಪಾಟೀಲ್, ಮಹಾದೇವಿ, ಈಶ್ವರ, ಗೌರಮ್ಮ, ರಮೇಶ ದೇವಕರ ದೇವರಾಜ, ಭೀಮು ಆಂದೋಲಾ ಹಾಗೂ ಪಕ್ಷದ ಸದಸ್ಯರು, ಬೆಂಬಲಿಗರು ಮೊದಲಾದವರು ಭಾಗವಹಿಸಿದ್ದರು.



ಕಲಬುರಗಿಯಲ್ಲಿ ಡಿ.ಕೆ. ಶಿವಕುಮಾರ್ ಅಭಿಮಾನಿಗಳ ಸಂಭ್ರಮಾಚರಣೆ

ಕಲಬುರಗಿ,ಜೂ.01- ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ವಹಿಸಿಕೊಳ್ಳಲಿದ್ದು, ಈ ಹಿನ್ನೆಲೆಯಲ್ಲಿ ಕಲಬುರಗಿ ನಗರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸಂಭ್ರಮಾಚರಣೆ ನಡೆಸಿದರು.

ನಗರದ ಶ್ರೀ ಶರಣಬಸವೇಶ್ವರ ದೇವಸ್ಥಾನ ಆವರಣದಲ್ಲಿ ಕಾಂಗ್ರೆಸ್ ಮುಖಂಡ ಶರಣು ತೆಗ್ಗನೂರ ಅವರ ನೇತೃತ್ವದಲ್ಲಿ ವಿಶೇಷ ಪೂಜೆ ಸಲ್ಲಿಸಿ ವಿಜಯೋತ್ಸ ವ ಆಚರಿಸಲಾಯಿತು.

ಡಿ.ಕೆ. ಶಿವಕುಮಾರ್ ಅವರ 60 ಅಡಿ ಎತ್ತರದ ಕಟೌಟ್ ಎದುರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ಹರ್ಷ ವ್ಯಕ್ತಪಡಿಸಿದರೆ, ಮುಖಂಡರು ಹಾಗೂ ಅಭಿಮಾನಿಗಳು ಪರಸ್ಪರ ಸಿಹಿ ಹಂಚಿಕೊಂಡು ಶುಭಾಶಯ ವಿನಿಮಯ ಮಾಡಿಕೊಂಡರು.

ಈ ವೇಳೆ ಮಾತನಾಡಿದ ಶರಣು ತೆಗ್ಗನೂರ, ರಾಜ್ಯದ ಅಭಿವೃದ್ಧಿಗೆ ದೂರದೃಷ್ಟಿ, ದೃಢ ನಾಯಕತ್ವ ಮತ್ತು ಜನಪರ ಆಡಳಿತ ಅತ್ಯಗತ್ಯವಾಗಿದೆ. ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಿರುವುದು ಕಾಂಗ್ರೆಸ್ ಕಾರ್ಯಕರ್ತರಿಗೆ ಮಾತ್ರವಲ್ಲದೆ ರಾಜ್ಯದ ಜನತೆಗೆ ಸಹ ಸಂತಸದ ವಿಚಾರವಾಗಿದೆ ಎಂದು ಹೇಳಿದರು.

ಸಂಘಟನಾ ಶಕ್ತಿ, ಆಡಳಿತಾತ್ಮಕ ಅನುಭವ ಮತ್ತು ಅಭಿವೃದ್ಧಿ ಪರ ಚಿಂತನೆಯ ಮೂಲಕ ರಾಜ್ಯವನ್ನು ಹೊಸ ದಿಕ್ಕಿನಲ್ಲಿ ಮುನ್ನಡೆಸುವ ಸಾಮರ್ಥ್ಯ ಡಿ.ಕೆ. ಶಿವಕುಮಾರ್ ಅವರಲ್ಲಿದೆ. ಅವರ ನಾಯಕತ್ವದಲ್ಲಿ ಕರ್ನಾಟಕವು ಮತ್ತಷ್ಟು ಅಭಿವೃದ್ಧಿ ಮತ್ತು ಸಮೃದ್ಧಿಯತ್ತ ಸಾಗಲಿದೆ ಎಂಬ ವಿಶ್ವಾಸ ನಮಗಿದೆ ಎಂದು ಅವರು ತಿಳಿಸಿದರು.

ಗ್ರಾಮ ಪಂಚಾಯತಿ ನೌಕರರ ಪ್ರಮುಖ ಬೇಡಿಕೆಗಳನ್ನು ಈಡೇರಿಸಲು ಆಗ್ರಹ: ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ



ಹೊಸಪೇಟೆ/ವಿಜಯನಗರ,ಜೂ.01- ಗ್ರಾಮ ಪಂಚಾಯತಿ ನೌಕರರ ಹಲವು ವರ್ಷಗಳಿಂದ ಬಾಕಿ ಉಳಿದಿರುವ ಪ್ರಮುಖ ಬೇಡಿಕೆಗಳನ್ನು ತಕ್ಷಣ ಈಡೇರಿಸಬೇಕೆಂದು ಒತ್ತಾಯಿಸಿ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು) ವತಿಯಿಂದ ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ, ಕಳೆದ ನಾಲ್ಕು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಸರ್ಕಾರ ಹೊರಡಿಸಿರುವುದನ್ನು ಸ್ವಾಗತಿಸಿ, ದುಡಿಯುವ ಕಾರ್ಮಿಕರಿಗೆ ಕನಿಷ್ಠ ವೇತನ ಜಾರಿಗೊಳಿಸಲು ಕ್ರಮ ಕೈಗೊಂಡಿರುವ ಸರ್ಕಾರಕ್ಕೆ ಸಂಘದ ರಾಜ್ಯ ಸಮಿತಿಯ ಪರವಾಗಿ ಅಭಿನಂದನೆ ಸಲ್ಲಿಸಲಾಯಿತು.

ಆದಾಗ್ಯೂ, ಗ್ರಾಮ ಪಂಚಾಯತಿ ನೌಕರರ ಹಲವು ಪ್ರಮುಖ ಬೇಡಿಕೆಗಳು ಇನ್ನೂ ಇತ್ಯರ್ಥವಾಗದೇ ಉಳಿದಿದ್ದು, ಈ ಕುರಿತು ಸಚಿವರು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳೊಂದಿಗೆ ಹಲವು ಸುತ್ತಿನ ಮಾತುಕತೆ ನಡೆದಿದ್ದರೂ ಯಾವುದೇ ನಿರ್ಧಾರ ಕೈಗೊಳ್ಳಲಾಗಿಲ್ಲ ಎಂದು ಸಂಘದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು.

ಸಂಜೀವಿನಿ ಒಕ್ಕೂಟದ ಮೂಲಕ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ವಾಹನ ಚಾಲಕಿಯರು ಹಾಗೂ ಸ್ವಚ್ಛವಾಹಿನಿ ಮಹಿಳಾ ಕಾರ್ಮಿಕರು ಕಳೆದ ಎರಡು ವರ್ಷಗಳಿಂದ ಸಮರ್ಪಕ ವೇತನವಿಲ್ಲದೆ ಸ್ವಚ್ಛತಾ ಕಾರ್ಯ ನಿರ್ವಹಿಸುತ್ತಿದ್ದು, ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಇವರನ್ನು ಗ್ರಾಮ ಪಂಚಾಯತಿ ನೌಕರರೆಂದು ಪರಿಗಣಿಸಿ, ಕನಿಷ್ಠ ವೇತನ ಅಧಿಸೂಚನೆಯನ್ನು ತಕ್ಷಣ ಜಾರಿಗೊಳಿಸಬೇಕು ಎಂದು ಆಗ್ರಹಿಸಲಾಯಿತು.

ಸಂಘವು ಸರ್ಕಾರದ ಮುಂದೆ ಈ ಕೆಳಕಂಡ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿದೆ:

ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕರವಸೂಲಿಗಾರರು, ಕ್ಲರ್ಕ್-ಕಂ-ಡಾಟಾ ಎಂಟ್ರಿ ಆಪರೇಟರ್‌ಗಳು, ನೀರುಗಂಟಿಗಳು, ಜವಾನರು ಹಾಗೂ ಸ್ವಚ್ಛತಾಗಾರರನ್ನು ಏಕಕಾಲದಲ್ಲಿ ಸರ್ಕಾರಿ ನೌಕರರೆಂದು ಘೋಷಿಸಬೇಕು.

ಸೇವಾ ಹಿರಿತನವನ್ನು ಪರಿಗಣಿಸಿ ವಾರ್ಷಿಕ ಇನ್‌ಕ್ರಿಮೆಂಟ್ ನೀಡಬೇಕು.

ಗ್ರಾಮ ಪಂಚಾಯತಿ ನೌಕರರು ನಿವೃತ್ತಿ ಹೊಂದಿದಾಗ ಅಥವಾ ಮರಣ ಹೊಂದಿದಲ್ಲಿ ₹6 ಲಕ್ಷ ಇಡಗಂಟು (ಪರಿಹಾರ) ನೀಡಬೇಕು. ಜೊತೆಗೆ ಗ್ರಾಮ ಪಂಚಾಯತಿ ಠರಾವು ಮೂಲಕ ನೇಮಕಗೊಂಡು ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆಯದ ಸಿಬ್ಬಂದಿಗಳಿಗೂ ಈ ಸೌಲಭ್ಯವನ್ನು ವಿಸ್ತರಿಸಬೇಕು.

ಬಾಕಿ ಉಳಿದಿರುವ ಎಲ್ಲಾ ಬೇಡಿಕೆಗಳನ್ನು ಶೀಘ್ರದಲ್ಲಿ ಈಡೇರಿಸಿ ಗ್ರಾಮ ಪಂಚಾಯತಿ ನೌಕರರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಸಂಘದ ಮುಖಂಡರು ಸರ್ಕಾರವನ್ನು ಒತ್ತಾಯಿಸಿದರು.

ಜೂನ್ 1 ರಿಂದ 12ರ ವರೆಗೆ ಅಗ್ನಿವೀರ್ ನೇಮಕಾತಿಗೆ ಆನ್?ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆ

ಕಲಬುರಗಿ,ಜೂ.01- ಅಗ್ನಿವೀರ್ ಸೇನಾ ನೇಮಕಾತಿಗಾಗಿ ಆನ್?ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆ2026 ಇದೇ ಜೂನ್ 1 ರಿಂದ 12 ರವರೆಗೆ ಬೆಳಿಗ್ಗೆ 6 ರಿಂದ ರಾತ್ರಿ? 8 ಗಂಟೆ ವರೆಗೆ ಜರುಗಲಿದೆ ಎಂದು ಹೆಚ್ಚುವರಿ ಮಹಾ ನಿರ್ದೇಶಕ (ನೇಮಕಾತಿ) ಮೇಜರ್ ಜನರಲ್ ಬ್ರೂಸ್ ಫನಾಂ ಡೀಸ್ ತಿಳಿಸಿದ್ದಾರೆ. ಕಲಬುರಗಿ ನಗರದ ಶ್ರೀ ಶರಣಬಸವೇಶ್ವರ ವಿದ್ಯಾ ವರ್ಧಕ? ಸಂಘದ ಎಸ್.ಬಿ. ಕಾಲೇಜು ಕ್ಯಾಂಪಸ್ ಅವರಣದ ಗೋದುತಾಯಿ ಇಂಜಿನಿಯರಿಂಗ್ ಕಾಲೇಜು ಪರೀಕ್ಷಾ ಕೇಂದ್ರವಾಗಿ ಗುರತಿಸಲಾಗಿದೆ ಎಂದಿದ್ದಾರೆ.

ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿದ್ಯಾಲಯದಲ್ಲಿ ವಿಶ್ವ ತಂಬಾಕು ನಿಷೇದ ದಿನಾಚರಣೆ

ತಂಬಾಕಿನ ಹೊಗೆ ಬಿಟ್ಟವನು ಬೇಗ ಹೊಗೆ ಹಾಕಿಸಿಕೊಳ್ಳುವ : ಡಾ. ಸುರೇಂದ್ರ ಬಾಬು



ನಗರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ವಿದ್ಯಾಲಯದ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕನವರ ಅಧ್ಯಕ್ಷತೆ, ಕಾರ್ಯದರ್ಶಿಗಳಾದ ಬಿ.ಕೆ. ಶಾರದಾ ಅಕ್ಕನವರ ನೇತೃತ್ವದಲ್ಲಿ ವಿಶ್ವ ತಂಬಾಕು ನಿಷೇದ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟಕರಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು, ಆಗಮಿಸಿದ್ದರು, ಮಾನಸಿಕ ರೋಗ ತಜ್ಞರಾದ ಡಾ. ಮನೋಹರ ಪತ್ತಾರ, ಡಾ. ಸುಶ್ರೀತ್ ಎ. ನೀಲೋಪಂತ ರಿಮ್ಸ್ ಆಸ್ಪತ್ರೆ, ಡಾ. ದಂಡಪ್ಪ ಬಿರಾದಾರ ರೆಡ್ ಕ್ರಾಸ್ ಜಿಲ್ಲಾ ಸಂಚಾಲಕರು, ನೀಲಕಂಠರಾಯ ವಕೀಲರು ವೇದಿಕೆಯ ಮೇಲೆ ಆಶೀನರಾಗಿದ್ದರು.

ದೀಪ ಬೆಳಗುವ ಮೂಲಕ ಉದ್ಘಾಟಿಸಿದ ಡಾ. ಸುರೇಂದ್ರ ಬಾಬು ಮಾತನಾಡಿ ಪ್ರಜಾಪಿತಾ ಬ್ರಹ್ಮಕುಮಾರಿ ವಿದ್ಯಾಲಯದಲ್ಲಿ ವಿಶ್ವ ತಂಬಾಕು ನಿಷೇದ ದಿನಾಚರಣೆ ಮಾಡಿದ್ದು ಶ್ಲಾಘನೀಯವಾದುದು, ದೇಶ ನಾಡಿನಲ್ಲಿ ಹೆಚ್ಚಾಗಿ

ಯುವ ಪೀಳಿಗೆಯು ತಂಬಾಕಿನಿಂದ ಉಂಟಾಗುವ ಅನೇಕ ದುಷ್ಪರಿಣಾಮಗಳು ಗುರಿಯಾಗುತ್ತಿದ್ದಾರೆ, ಸಿಗರೇಟ್ ಸೇವನೆ ಇಲ್ಲದೆ ಮಲಮೂತ್ರ ಬರಲ್ಲ, ಗುಟ್ಕಾ ಹಾಕದಿದ್ದರೆ ಶೌಚ ಬರಲ್ಲ ಎಂದು ಇವೆಲ್ಲ ಅವರ ಮನಸ್ಸಿನಲ್ಲಿ ನಾಟಿಕೊಂಡಿವೆ ಹೊರತು ಅದೇ ಜೀವನ ಅಲ್ಲ, ಚಲನ ಚಿತ್ರ ತಾರೆಯರಂತೆ ಸಿಗರೇಟ್ ಸ್ಟೈಲ್ ಮಾಡಿ ಹಚ್ಚುವುದು ತಾರೆಯರಂತೆ ತಮ್ಮ ಬಾಯಿಯಿಂದಲೇ ತರಹ ತರಹದ ಹೊಗೆ ಬಿಡುವುದು ಕೊನೆಗೆ ಹತ್ತು ವರ್ಷ ಬದುಕುವ ತಮ್ಮ ಜೀವನವನ್ನು ಒಂದೇ ವರ್ಷದಲ್ಲಿ ಅದೇ ಹೊಗೆ ಹಾಕಿಸಿಕೊಂಡು ಕುಟುಂಬವನ್ನು ಪರದೇಶಿಯನ್ನಾಗಿ ಮಾಡಿ ತಾವು ಗೋಡೆಯ ಭಾವಚಿತ್ರದಲ್ಲಿ ಕಂಗೊಳಿಸುವುದು, ಆದುದರಿಂದ ಮನುಷ್ಯನು ಮಾಡುವ ದುಶ್ಚಟಗಳಿಂದ ಮನೆಯವರಿಗೂ ತೊಂದರೆ, ಹಾಗೆ ಇಡೀ ಕುಟುಂಬ ಆರ್ಥಿಕವಾಗಿ ಹಿಂದುಳಿಯುವುದಕ್ಕೆ ಕಾರಣವಾಗುತ್ತದೆ ಎಂದು ಹೇಳಿದರು. ತಂಬಾಕು ಮುಕ್ತ ಭಾರತದ, ತಂಬಾಕು ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ಈಶ್ವರಿ ವಿಶ್ವವಿದ್ಯಾಲಯದ ಈ ಒಂದು ಕಾರ್ಯಕ್ರಮ ಅತ್ಯಂತ ಮಹತ್ವಪೂರ್ಣವಾದ ಹೆಜ್ಜೆ ಎಂದು ವಿವರಿಸಿದರು.

ತಂಬಾಕಿನ ಈ ಚಟದಿಂದ ಮುಕ್ತಿ ಹೊಂದಲು ರಾಯಚೂರು ಜಿಲ್ಲೆಯ ರಿಮ್ಸ್ ಆಸ್ಪತ್ರೆಯಲ್ಲಿ' ಟಿ.ಸಿ. ಎಸ್. ವಿಶೇಷ ಘಟಕವನ್ನು ಸ್ಥಾಪಿಸಲಾಗಿದ್ದು ತಂಬಾಕಿನಿಂದ ತೊಂದರೆಗೊಳಗಾಗಿರುವ ರಾಯಚೂರು ಜಿಲ್ಲೆಯ ಸರ್ವರೂ ಈ ಕೇಂದ್ರದ ಸದುಪಯೋಗಪಡಿಸಿಕೊಂಡು ತಂಬಾಕು ಚಟದಿಂದ ಮುಕ್ತರಾಗಬೇಕೆಂದು ವಿನಂತಿಸಿದರು.

ಈಶ್ವರಿ ವಿಶ್ವವಿದ್ಯಾಲಯದ ಪ್ರಧಾನ ಸಂಚಾಲಕರಾದ ಸ್ಮಿತಾ ಅಕ್ಕನವರು ಮಾತನಾಡಿ ಚಟಗಳು ಮನುಷ್ಯನನ್ನು ಚಟ್ಟದವರೆಗೆ ಕೊಂಡೊಯ್ಯುತ್ತವೆ, ಇಂತಹ ಚಟಗಳಿಂದ ಮುಕ್ತ ಮಾಡಲು ಭಾರತ ಸರ್ಕಾರ ಹಾಗೂ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ನಡುವೆ ಆಗಿರುವ ಮೆಮೋರೆಂಡಂ ಆಫ್ ಅಂಡರ್ ಸ್ಟ್ಯಾಂಡಿಂಗ್ ಎಂಬ ವಿವರವನ್ನು ವಿವರಿಸುತ್ತಾ ನಶಾಮುಕ್ತ ಭಾರತದ ಮಾಡಲು ಈಶ್ವರಿಯ ವಿಶ್ವವಿದ್ಯಾಲಯವು ಮಿಷನ್ ಸ್ಪಂದನ ಕಾರ್ಯಕ್ರಮದ ಅಡಿಯಲ್ಲಿ ರಾಷ್ಟ್ರಮಟ್ಟದಲ್ಲಿ ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಂಡಿರುವ ವಿವರಗಳನ್ನು ಹಂಚಿಕೊಂಡರು, ಸಮಾಜವನ್ನು ನಶಾ ಮುಕ್ತ ಮಾಡಲು ಪ್ರತಿಯೊಬ್ಬರು ಸಹಕರಿಸಬೇಕು ಎಂದು ವಿನಂತಿಸಿದರು.

ಮನೋಹರ ಪತ್ತಾರ ಜಿಲ್ಲಾ ಮನೋರೋಗ ಹಾಗೂ ಮಾನಸಿಕ ಸ್ವಾಸ್ಥ್ಯ ಅಧಿಕಾರಿಗಳು ಇವರು ಮಾತನಾಡುತ್ತಾ ಮಾನಸಿಕ ಸ್ವಾಸ್ಥ್ಯ ಮತ್ತು ಆಧ್ಯಾತ್ಮಿಕತೆ ಒಂದೇ ನಾಣ್ಯದ ಎರಡು ಮುಖಗಳೆಂದು ವಿವರಿಸಿದರು ಈ ಎರಡರಲ್ಲಿ ಯಾವುದಾದರೂ ಒಂದಕ್ಕೆ ತೊಂದರೆ ಆದರೂ ಸಮಾಜದ ಸ್ವಾಸ್ಥ್ಯ ಕೆಡುತ್ತದೆ ಎಂದು ಹೇಳಿದರು, ಒಂದು ದೇಶವನ್ನು ಹಾಳು ಮಾಡಲು ಬಾಂಬುಗಳು ಹಾಕುವ ಅವಶ್ಯಕತೆ ಇಲ್ಲ ಸಮಾಜದ ಮಾನವ ಸಂಪತ್ತನ್ನು ಈ ರೀತಿ ದುಶ್ಚಟಗಳಿಗೆ ಬಲಿಯಾಗಿಸಿದರೆ ಆ ದೇಶದ ಸರ್ವನಾಶವಾಗುವುದು ಖಚಿತ ಎಂದು ಹೇಳಿದರು.

ರಿಮ್ಸ್ ಅಬಾರ್ಕ್ ಆಯುಷ್ಮಾನ್ ಭಾರತ ಕರ್ನಾಟಕದ ಡಾ. ಸುಶ್ರಿತ ಎ ನೀಲೋಪಂತ ಮಾತನಾಡಿ ತಾವು ತಮ್ಮ ಜೀವನದಲ್ಲಿ ಸ್ನೇಹಿತರಿಂದ ತಂಬಾಕಿನ ಚಟಗಳಿಗೆ ಬಲಿಯಾಗದೆ ಯಾವ ರೀತಿಯಾಗಿ ನಶಾ ಮುಕ್ತರಾಗಿ ಉಳಿದರು ಎನ್ನುವುದನ್ನು ವಿವರಿಸಿದರು, ಹಾಗೂ ಸಿಗರೇಟ್ ಜೀವನವನ್ನು ಸುಡುತ್ತದೆ ಗುಟುಕ ಜೀವನವನ್ನು ಕರಗಿಸುತ್ತದೆ ಎಂದು ಹೇಳಿದರು.

ಡಾ. ದಂಡಪ್ಪ ಬಿರಾದಾರ ಜಿಲ್ಲಾ ಸಂಚಾಲಕರು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಯಚೂರು ಮಾತನಾಡಿ ನನ್ನ ಭಾರತ ನಶಮುಕ್ತ ಭಾರತ ನನ್ನ ಕರ್ನಾಟಕ ನಶಾಮುಕ್ತ ಕರ್ನಾಟಕ ನನ್ನ ಜಿಲ್ಲೆ ನಶಾಮುಕ್ತ ಜಿಲ್ಲೆ ಎನ್ನುವ ಕಾರ್ಯದಲ್ಲಿ ಪ್ರತಿಯೊಬ್ಬರು ಕಾರ್ಯವನ್ನ ನಿರ್ವಹಿಸಬೇಕು ಸಿಗರೇಟ್ ಗುಟುಗ ಪಾನ್ ಪರಾಕ್ ಮಧ್ಯಪಾನ ಸೇವನಿಗೆ ಯುವಕರು ಮಾರುಹೋಗುತ್ತಿರುವುದು ವಿಷಾದನೀಯ ಸಂಗತಿ ಯುವಕರನ್ನು ದುಶ್ಚಟಗಳಿಂದ ಗಳಿಂದ ದೂರ ಮಾಡಲು ಬ್ರಹ್ಮಕುಮಾರಿ ಸಂಸ್ಥೆ ನಿರಂತರವಾಗಿ ಇಂತ ಕಾರ್ಯಗಳನ್ನ ಮಾಡುತ್ತಿರುವುದು ಸಂತೋಷದ ಸಂಗತಿ ನಶಾ ಮುಕ್ತರಾಗುವುದರ ಬಗ್ಗೆ ಸರ್ವಜ್ಞನ ವಚನಗಳು ದಾಸರ ವಚನಗಳ ಮೂಲಕ ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ವಿಶ್ವ ತಂಬಾಕು ನಿಷೇದದ ಬಗ್ಗೆ ಪ್ರಜಾಪಿತಾ ಬ್ರಹ್ಮಕುಮಾರಿ ವಿಶ್ವ ವಿದ್ಯಾಲಯವು ಒಂದು ವರ್ಷದ ಕಾರ್ಯಕ್ರಮಗಳನ್ನು ಹಾಕಿಕೊಂಡ ವಿವರದ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಸರ್ವ ಪರಿವಾರದವರು ಉಪಸ್ಥಿತರಿದ್ದರು.

ನನ್ನ ನಕಲಿ ಆಡಿಯೋ ವೈರಲ್, ಜಮೀರ್ ಅಹ್ಮದ್ ಖಾನ್: ಯಾವುದೇ ತನಿಖೆಗೂ ಸಿದ್ಧ ಎಂದು ಸವಾಲು

ಬೆಂಗಳೂರು,ಜೂ.01-

ರಾಜ್ಯದ ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ನನ್ನ ಕುರಿತ ಆಡಿಯೋ ನಕಲಿ, ಎಐ ತಂತ್ರಜ್ಞಾನ ಬಳಸಿ ಮಾಡಲಾಗಿದೆ ಎಂದು ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ. ಈ ಕುರಿತು ಮಾಧ್ಯಮ ಹೇಳಿಕೆ ನೀಡಿರುವ ಅವರು, ಇದೊಂದು ರಾಜಕೀಯ ಷಡ್ಯಂತ್ರ. ನಕಲಿ ಆಡಿಯೋ ಮಾಡಿ ವೈರಲ್ ಮಾಡಿರುವವರ ವಿರುದ್ಧ ಸೈಬರ್ ಠಾಣೆಗೆ ದೂರು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಆಡಿಯೋ ಬಗ್ಗೆ ಯಾವುದೇ ತನಿಖೆ ನಡೆಸಲಿ- ಸವಾಲು: ಆಡಿಯೋ ಬಗ್ಗೆ ಯಾವ ತನಿಖೆಗೆ ಬೇಕಾದರೂ ಒಳಪಡಿಸಲಿ ಎಂದು ಸವಾಲು ಹಾಕಿದ್ದಾರೆ. ನಾನು ಆ ರೀತಿ ಮಾತನಾಡಿಲ್ಲ. ಗೊಂದಲ ಉಂಟು ಮಾಡಲು ಇದೆಲ್ಲವೂ ಸೃಷ್ಟಿ ಮಾಡಲಾಗಿದೆ. ಇದು ಕಿಡಿಗೇಡಿಗಳ ಕೃತ್ಯ. ಇದನ್ನು ಯಾರೂ ನಂಬಬಾರದು ಎಂದು ತಿಳಿಸಿದ್ದಾರೆ.

ಡಿಕೆ ಶಿವಕುಮಾರ್ ಬುಧವಾರ ಪ್ರಮಾಣ ವಚನ ಸ್ವೀಕಾರ ಮಾಡಲಿದ್ದು, ಸುಮಾರು 10 - 12 ಜನರಿಗೆ ಸಂಪುಟ ಸದಸ್ಯರನ್ನೂ ಸೇರ್ಪಡೆಗೊಳಿಸಲಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿದೆ. ಇತ್ತ ಜಮೀರ್ ಅಹ್ಮದ್ ಖಾನ್ ಕೂಡ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದಾರೆ. ಆದರೆ, ಇದೇ ಸಂದರ್ಭದಲ್ಲಿ ಜಮೀರ್ ಅವರದ್ದು ಎನ್ನಲಾಗಿರುವ ಆಡಿಯೋ ವೈರಲ್ ಆಗುತ್ತಿದೆ.

ಚಿಕ್ಕಬಳ್ಳಾಪುರದಲ್ಲಿ ಭೀಕರ ಸರಣಿ ಅಪಘಾತ ; ರಸ್ತೆ ಬದಿ ನಿಂತಿದ್ದ ಲಾರಿಗೆ ಆಟೋ ಡಿಕ್ಕಿ, ಚಾಲಕ ಸೇರಿ ಆರು ಜನರ ಸಾವು



ಚಿಕ್ಕಬಳ್ಳಾಪುರ : ರಾಷ್ಟ್ರೀಯ ಹೆದ್ದಾರಿ 7 ರಲ್ಲಿ ಭಾನುವಾರ ಥಾರ್ ಕಾರು, ಆಟೋ ಮತ್ತು ಲಾರಿ ನಡುವೆ ಸಂಭವಿಸಿದ ಭೀಕರ ಸರಣಿ ಅಪಘಾತದಲ್ಲಿ ಸ್ಥಳದಲ್ಲೇ 5 ಮಂದಿ ಸಾವನ್ನಪ್ಪಿದ್ದು, ಇನ್ನೋರ್ವರು ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ಮೃತರನ್ನು ಆಟೋ ಚಾಲಕ ಅಂಜಿನಪ್ಪ (35), ಬಾಗೇಪಲ್ಲಿ ಪಟ್ಟಣದ ನಿವಾಸಿಗಳಾದ ಉಮಾದೇವಿ (25), ವಿಜಯ (40), ಲಕ್ಷಮ್ಮ (50), ಸರೋಜಮ್ಮ (55) ಎಂದು ಗುರುತಿಸಲಾಗಿದೆ.

ಅರುಣಮ್ಮ (45) ಆಸ್ಪತ್ರೆಯಲ್ಲಿ ಮೃತಪಟ್ಟವರು. ಗಾಯಾಳುಗಳಾದ ಗಂಗಾದೇವಿ, ಲಕ್ಷ್ಮೀದೇವಿ, ರತ್ಮಮ್ಮ ಎಂಬುವರ ಸ್ಥಿತಿ ಚಿಂತಾಜನಕವಾಗಿದೆ.

ಬಾಗೇಪಲ್ಲಿಯ ರಾಷ್ಟ್ರೀಯ ಹೆದ್ದಾರಿ ಸುಂಕಲಮ್ಮ ದೇವಸ್ಥಾನದ ಬಳಿ ಈ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಅಪಘಾತದಲ್ಲಿ ಆಟೋದಲ್ಲಿದ್ದ 5 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಆಟೋದಲ್ಲಿ 8 ಮಂದಿ ಕೂಲಿ ಕೆಲಸಕ್ಕೆ ಹೊರಟಿದ್ದರು. ಈ ವೇಳೆ ಅಪಘಾತ ಸಂಭವಿಸಿದೆ. ಇನ್ನುಳಿದ ಕೂಲಿ ಕಾರ್ಮಿಕರಿಗೂ ತೀವ್ರ ಸ್ವರೂಪದ ಗಾಯವಾಗಿದ್ದು, ಗಾಯಾಳುಗಳನ್ನು ಬಾಗೇಪಲ್ಲಿ ಸಾರ್ವಜನಿಕ ಆಸ್ಪತ್ರೆಗೆ ಸೇರಿಸಲಾಗಿದೆ.

ಮೊದಲಿಗೆ ಥಾರ್ ಕಾರು ಆಟೋಗೆ ಡಿಕ್ಕಿ ಹೊಡೆದಿದೆ, ಡಿಕ್ಕಿಯಿಂದಾಗಿ ನಿಯಂತ್ರಣ ತಪ್ಪಿದ ಆಪೆ ಆಟೋ ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ ಅದರ ರಭಸಕ್ಕೆ ಆಟೋ ಸಂಪೂರ್ಣ ಜಖಂ ಆಗಿದೆ. ಸ್ಥಳಕ್ಕೆ ಬಾಗೇಪಲ್ಲಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಘಟನೆ ಸಂಬಂಧ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ವೇಗವಾಗಿ ಬರುತ್ತಿದ್ದ ಥಾರ್ ಕಾರು ಮುಂಬದಿಯಲ್ಲಿದ್ದ ಆಟೋಗೆ ಡಿಕ್ಕಿ ಹೊಡೆದಿದೆ. ಇದರಿಂದ ನಿಯಂತ್ರಣ ಕಳೆದುಕೊಂಡ ಆಟೋ ಚಾಲಕ ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದಿದ್ದಾರೆ. ಆಟೋದಲ್ಲಿ ಒಬ್ಬ ಪುರುಷ ಸೇರಿದಂತೆ 8 ಮಂದಿ ಮಹಿಳೆಯರಿದ್ದರು. ಅಪಘಾತದಿಂದಾಗಿ ನಾಲ್ವರು ಮಹಿಳೆಯರು, ಓರ್ವ ಪುರುಷ ಸೇರಿದಂತೆ 5 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಮಾಹಿತಿ ನೀಡಿದರು.

ಆಟೋಗೆ ಡಿಕ್ಕಿ ಹೊಡೆದ ಥಾರ್ ಕಾರು ಚಾಲಕ ಕಾರನ್ನು ರಸ್ತೆ ಬದಿಯಲ್ಲಿಯೇ ನಿಲ್ಲಿಸಿ ಪರಾರಿಯಾಗಿದ್ದಾನೆ. ಆತನ ಸುಳಿವು ಪತ್ತೆಯಾಗಿದ್ದು, ತಕ್ಷಣವೇ ಬಂಧಿಸಿ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೆಯೇ ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ಲಾರಿ ಚಾಲಕನ ವಿರುದ್ಧವೂ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ದೇವೇಗೌಡರ ಕೋಟೆಯಲ್ಲಿ ಡಿಕೆಶಿ ಗುದ್ದಾಟ; ಒಕ್ಕಲಿಗ ನಾಯಕತ್ವ ಪಟ್ಟ ಸುಲಭವೇ?



2018ರ ಕರ್ನಾಟಕ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಅತಂತ್ರ ಫಲಿತಾಂಶ ಬಂದಾಗ, ಬಿಜೆಪಿಯ ಕುದುರೆ ವ್ಯಾಪಾರಕ್ಕೆ ಅವಕಾಶ ನೀಡದಂತೆ ಶಾಸಕರನ್ನು ಹಿಡಿದಿಟ್ಟುಕೊಳ್ಳುವಲ್ಲಿ ಡಿಕೆ ಶಿವಕುಮಾರ್ ಪ್ರಮುಖ ಪಾತ್ರ ವಹಿಸಿದ್ದರು. 2023ರಲ್ಲಿ ಕಾಂಗ್ರೆಸ್ ಪಕ್ಷ ಬಹುಮತವನ್ನು ಪಡೆಯುವಲ್ಲಿ ಡಿಕೆ ಶಿವಕುಮಾರ್ ಅವರ ಶ್ರಮ ಇತ್ತು.

ಹಳೇ ಮೈಸೂರು ಹೇಳಿಕೇಳಿ ಒಕ್ಕಲಿಗರ ಪ್ರಾಬಲ್ಯದ ಪ್ರದೇಶ. ಸಾಂಪ್ರದಾಯಿಕವಾಗಿ ಇಲ್ಲಿ ದೇವೇಗೌಡರ ಕುಟುಂಬ ಮತ್ತು ಕಾಂಗ್ರೆಸ್ ನಡುವೆಯೇ ಹಣಾಹಣಿ ನಡೆಯುತ್ತಾ ಬಂದಿದೆ. ಇನ್ನೊಂದೆಡೆ ಒಕ್ಕಲಿಗರ ನಡುವೆ ಬೇರು ಬಿಡದ ಹೊರತು, ಕರ್ನಾಟಕದಲ್ಲಿ ಬಿಜೆಪಿ ಸ್ವತಂತ್ರವಾಗಿ ಅಧಿಕಾರಕ್ಕೇರಲು ಸಾಧ್ಯವಿಲ್ಲ. ಹೀಗಾಗಿ ಕೋಮುರಾಜಕಾರಣವನ್ನು ಹಳೇಮೈಸೂರು ಭಾಗದಲ್ಲಿ ವಿಸ್ತರಿಸುವ ಕಸರತ್ತನ್ನು ಸಂಘಪರಿವಾರ ಕಳೆದೈದು ವರ್ಷಗಳಿಂದ ನಿರಂತರ ಮಾಡುತ್ತಿದೆ. ಈಗ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಚಾಲ್ತಿಯಲ್ಲಿದ್ದರೂ ತನ್ನ ನೆಲೆಯನ್ನು ಒಕ್ಕಲಿಗರ ಪ್ರದೇಶದಲ್ಲಿ ವಿಸ್ತರಿಸಿಕೊಳ್ಳುವ ಪ್ರಯತ್ನಗಳನ್ನು ಬಿಜೆಪಿ ನಿಲ್ಲಿಸುವುದಿಲ್ಲ. ಈ ತ್ರಿಕೋನ ಸ್ಪರ್ಧೆಯಲ್ಲಿ ಕಾಂಗ್ರೆಸ್ ಒಂದು ಮಟ್ಟಿಗೆ ಒಕ್ಕಲಿಗರ ಮತಬ್ಯಾಂಕ್ ಉಳಿಸಿಕೊಳ್ಳಲೇಬೇಕು. ಆ ಪ್ರಯತ್ನದ ಮುಖವಾಗಿಯೂ ಡಿಕೆ ಶಿವಕುಮಾರ್ ನಾಯಕತ್ವ ಕಾಣಿಸಿಕೊಳ್ಳುತ್ತದೆ.

ಕನಕಪುರ ಬಂಡೆ ಎಂದೇ ಗುರುತಿಸಲ್ಪಡುವ ಡಿಕೆ ಶಿವಕುಮಾರ್ ಅವರು ಸೈದ್ಧಾಂತಿಕವಾಗಿ ಸಿದ್ದರಾಮಯ್ಯನವರಿಗೆ ಎಂದಿಗೂ ಪ್ರತಿಸ್ಪರ್ಧಿ ಆಗಲಾರರು. ವ್ಯವಹಾರ- ಡಿಕೆ ಶಿವಕುಮಾರ್ ಅವರ ನೇಚರ್. ಆದರೆ, ಪಕ್ಷದ ಸಂಘಟನೆಗಾಗಿ ಬಂಡವಾಳ ಹೂಡಿ, ಬಂಡವಾಳ ತೆಗೆಯಬಲ್ಲ ಚತುರ. ಎದುರಾಳಿಗಳು ಎಷ್ಟೇ ಕಿರುಕುಳ ಕೊಟ್ಟರೂ ಪಕ್ಷ ಬದಲಿಸದ ಗಟ್ಟಿಕಾಳು ಮತ್ತು ನಿಷ್ಠಾವಂತ. ದುರಾದೃಷ್ಟವಶಾತ್ ಡಿಕೆ ಶಿವಕುಮಾರ್ ಅವರ ದೊಡ್ಡ ಮಿತಿಯೇ ಇಮೇಜ್. ಸಂಘಟನಾ ಚಾಣಾಕ್ಷನಾದರೂ ಪಾಪ್ಯುಲರ್ ಲೀಡರ್ ಎಂಬ ಇಮೇಜ್ ಕೊರತೆಯ ಕಾರಣ, ಅವರ ಕುರ್ಚಿ ಕಾಲು ಯಾವಾಗ ಬೇಕಾದರೂ ಮುರಿದು ಬೀಳಬಹುದು. ಆದರೆ ಈ ಎಲ್ಲವನ್ನೂ ಮೀರಿ, ಬಲಿಷ್ಠ ಒಕ್ಕಲಿಗ ನಾಯಕನಾಗಿ ಹೊಮ್ಮಿದರೆ ಅದು ಅವರಿಗೂ ಕಾಂಗ್ರೆಸ್ ಪಕ್ಷಕ್ಕೂ ಬಹುಕಾಲದ ಆಸ್ತಿ.

ಡಿಕೆ ಶಿವಕುಮಾರ್ ಅವರಿಗೆ ಅಧಿಕಾರದ ಬಲ ಸಿಕ್ಕಿರುವ ಕಾರಣ, ಅವರ ಸುತ್ತ ಒಂದಿಷ್ಟು ಒಕ್ಕಲಿಗರು ಬಂದು ನಿಲ್ಲುತ್ತಾರೆಂಬುದು ನಿಜ. ಇಷ್ಟು ಮಾತ್ರಕ್ಕೆ ಡಿಕೆ ಶಿವಕುಮಾರ್ ಶಿವಕುಮಾರ್ ಶಿವಕುಮಾರ್ಯವರನ್ನು ಸಮುದಾಯದ ನಾಯಕರನ್ನಾಗಿ ಗುರುತಿಸಲು ಸಾಧ್ಯವೇ? ಎಚ್.ಡಿ.ಕುಮಾರಸ್ವಾಮಿಯವರನ್ನು ಮೀರಬಲ್ಲ ನಾಯಕನಾಗಿ ಹೊಮ್ಮಬಲ್ಲರೇ? ವಾಸ್ತವವೆಂದರೆ ಡಿಕೆ ಶಿವಕುಮಾರ್ ಅವರ ಈ ಏರುಗತಿಯ ಬೆಳವಣಿಗೆಯನ್ನು ದೇವೇಗೌಡರ ಫ್ಯಾಮಿಲಿ ಸುಲಭವಾಗಿ ತೆಗೆದುಕೊಳ್ಳುವುದಿಲ್ಲ.

ದೇವೇಗೌಡರ ಫ್ಯಾಮಿಲಿ ಜೊತೆಗೆ ಡಿಕೆ ಶಿವಕುಮಾರ್ ಕದನ

ಡಿಕೆ ಶಿವಕುಮಾರ್ ಅವರು ರಾಜಕಾರಣವನ್ನು ಪ್ರವೇಶಿಸಿದ ದಿನಗಳಿಂದಲೂ ದೇವೇಗೌಡರ ಫ್ಯಾಮಿಲಿಗೆ ಮಗ್ಗಲು ಮುಳ್ಳಾಗಿಯೇ ಬೆಳೆದಿದ್ದಾರೆಂಬುದನ್ನು ಚುನಾವಣಾ ಇತಿಹಾಸ ಹೇಳುತ್ತದೆ. 1985ರಲ್ಲಿ ಡಿಕೆ ಶಿವಕುಮಾರ್ ಚುನಾವಣಾ ರಾಜಕಾರಣಕ್ಕೆ ಪ್ರವೇಶಿಸುತ್ತಾರೆ. ದೇವೇಗೌಡರ ವಿರುದ್ಧ ಅಂದಿನ ಸಾತನೂರು ವಿಧಾನಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿದಾಗ ಡಿಕೆ ಶಿವಕುಮಾರ್ ಅವರ ವಯಸ್ಸು ಕೇವಲ 23 ಎನ್ನುತ್ತವೆ ವರದಿಗಳು (ಗಮನಿಸಿ: ಚುನಾವಣೆಗೆ ಸ್ಪರ್ಧಿಸಲು 25 ವರ್ಷ ವಯಸ್ಸಾಗಿರಬೇಕು. ಬಹುಶಃ ಶಾಲಾ ದಾಖಲಾತಿಗಳು 25 ವರ್ಷ ಎಂದು ತೋರಿಸಿರಬಹುದು ಅಥವಾ ದಾಖಲಾತಿಗಳನ್ನು ಸರಿಯಾಗಿ ಪರಿಶೀಲಿಸದೆ ಇದ್ದಿರಹುದು). ಮೊದಲ ಚುನಾವಣೆಯಲ್ಲಿ ಡಿಕೆ ಶಿವಕುಮಾರ್ 15,000 ಮತಗಳಿಂದ ಸೋತರೂ, ಕಾಂಗ್ರೆಸ್ ಪಕ್ಷದಲ್ಲಿ ಅವರಿಗೆ ಮನ್ನಣೆ ಸಿಗುತ್ತದೆ.

1989ರಲ್ಲಿ ಸಾತನೂರು ಕ್ಷೇತ್ರದಿಂದ ಸ್ಪರ್ಧಿಸಿ ಜನತಾ ಪಕ್ಷದ ಯು.ಕೆ. ಸ್ವಾಮಿ ಅವರನ್ನು ಸೋಲಿಸಿ, 27ನೇ ವಯಸ್ಸಿನಲ್ಲಿ ಮೊದಲ ಬಾರಿಗೆ ಡಿಕೆ ಶಿವಕುಮಾರ್ ವಿಧಾನಸಭೆ ಪ್ರವೇಶಿಸುತ್ತಾರೆ. ಎಸ್. ಬಂಗಾರಪ್ಪನವರ ಸಂಪುಟದಲ್ಲಿ ಕಿರಿಯ ವಯಸ್ಸಿಗೆ ಸಚಿವರಾಗುತ್ತಾರೆ. 1994ರಲ್ಲಿ ಕಾಂಗ್ರೆಸ್ ಟಿಕೆಟ್ ನಿರಾಕರಿಸಿದಾಗ, ಧೃತಿಗೆಡದೆ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಮತ್ತೆ ಸಾತನೂರಿನಲ್ಲಿ ಭರ್ಜರಿ ಜಯ ಸಾಧಿಸಿದ ಅವರು, ಮರಳಿ ಕಾಂಗ್ರೆಸ್ ಸೇರುತ್ತಾರೆ. 1999ರಲ್ಲಿ ಮತ್ತೆ ದೇವೇಗೌಡರ ಕುಟುಂಬವನ್ನು ಎದುರಿಸಬೇಕಾಗಿ ಬರುತ್ತದೆ. ದೇವೇಗೌಡರ ಪುತ್ರ ಎಚ್.ಡಿ. ಕುಮಾರಸ್ವಾಮಿ ಅವರು ಸಾತನೂರು ಕ್ಷೇತ್ರದಿಂದ ಸ್ಪರ್ಧಿಸಿದಾಗ, ಶಿವಕುಮಾರ್ ಅವರು ಎಚ್ಡಿಕೆ ಅವರನ್ನು ಸೋಲಿಸಿ ರಾಜಕೀಯದಲ್ಲಿ ಜೈಂಟ್ ಕಿಲ್ಲರ್ (ಮಹಾನಾಯಕನನ್ನು ಗೆದ್ದವರು) ಎಂಬ ಖ್ಯಾತಿ ಪಡೆಯುತ್ತಾರೆ. ಎಸ್.ಎಂ. ಕೃಷ್ಣ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ (1999-2004) ಡಿಕೆ ಶಿವಕುಮಾರ್ ಅವರು ನಗರಾಭಿವೃದ್ಧಿ ಮತ್ತು ಸಹಕಾರ ಇಲಾಖೆಯಂತಹ ಪ್ರಮುಖ ಖಾತೆಗಳನ್ನು ನಿಭಾಯಿಸುತ್ತಾರೆ. ಕೃಷ್ಣ ಅವರ ಕಾಲದಲ್ಲಿ ಡಿಕೆ ಶಿವಕುಮಾರ್ ಏರುಗತಿಯಲ್ಲಿ ಬೆಳೆದರೆಂದೇ ರಾಜಕೀಯ ವಿಶ್ಲೇಷಕರು ಗುರುತಿಸುತ್ತಾರೆ.

ದೇವೇಗೌಡರ ಪ್ರಭಾವವನ್ನು ಎದುರಿಸುವ ಅನಿವಾರ್ಯತೆಯಲ್ಲಿದ್ದ ಕಾಂಗ್ರೆಸ್ ಪಕ್ಷವು ಎಸ್.ಎಂ. ಕೃಷ್ಣ ಅವರೊಂದಿಗೆ ಕಿರಿಯ ಒಕ್ಕಲಿಗ ನಾಯಕನೊಬ್ಬನನ್ನು ಮುನ್ನೆಲೆಗೆ ತರಲು ಬಯಸಿತ್ತು. ಆ ನಿಟ್ಟಿನಲ್ಲಿ ಹೊಮ್ಮಿದ ಮುಖವೇ ಡಿ.ಕೆ. ಶಿವಕುಮಾರ್. ಪಕ್ಷ ಬಯಸಿದ್ದನ್ನು ಸಾಕಾರಗೊಳಿಸುವ ಪ್ರಯತ್ನದಲ್ಲಿ ತಕ್ಕಮಟ್ಟಿಗೆ ಡಿಕೆ ಶಿವಕುಮಾರ್ ಯಶಸ್ವಿಯೂ ಆಗಿದ್ದಾರೆ. 2004ರ ಲೋಕಸಭೆ ಚುನಾವಣೆಯಲ್ಲಿ ಅಂದಿನ ಕನಕಪುರ ಕ್ಷೇತ್ರದಲ್ಲಿ ಪತ್ರಕರ್ತೆ ತೇಜಸ್ವಿನಿ ಗೌಡ ಅವರನ್ನು ಕಾಂಗ್ರೆಸ್‌ನಿಂದ ಕಣಕ್ಕಿಳಿಸಿ, ದೇವೇಗೌಡರನ್ನು ಸೋಲಿಸಿದಾಗ ಡಿಕೆ ಶಿವಕುಮಾರ್ ಅವರ ಸ್ಥಾನಮಾನ ಮತ್ತಷ್ಟು ಬಲವಾಗುತ್ತದೆ. ಆನಂತರ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರಬಲ ರಾಜಕೀಯ ಶಕ್ತಿಯಾಗಿಯೂ ಅವರು ಗುರುತಿಸಿಕೊಳ್ಳುತ್ತಾರೆ. ಅದೇ ಪ್ರದೇಶದಲ್ಲಿ ತಮ್ಮ ರಾಜಕೀಯ ನೆಲೆಯನ್ನು ನಿರ್ಮಿಸಿಕೊಂಡಿದ್ದ ಕುಮಾರಸ್ವಾಮಿ ಅವರೊಂದಿಗೆ ಸಹಜವಾಗಿ ರಾಜಕೀಯ ವೈರತ್ವ ಬೆಳೆಯುತ್ತದೆ.

ಅವಧಿ ಪೂರ್ಣಕ್ಕೂ ಮುನ್ನವೇ ಎಸ್.ಎಂ. ಕೃಷ್ಣ ಅವರು ಚುನಾವಣೆಗೆ ಹೋದಂತಹ ಸಂದರ್ಭದಲ್ಲಿ ಅತಂತ್ರ ಫಲಿತಾಂಶ ಬಂದು ಜೆಡಿಎಸ್-ಕಾಂಗ್ರೆಸ್ ಸಮ್ಮಿಶ್ರ ಸರ್ಕಾರ (2004-05) ರಚನೆಯಾಗುತ್ತದೆ. ಧರಂಸಿಂಗ್ ಮುಖ್ಯಮಂತ್ರಿಯಾಗುತ್ತಾರೆ. ಆದರೆ ಮೈತ್ರಿ ಸರ್ಕಾರದಲ್ಲಿ ದೇವೇಗೌಡರ ಬಣವು ಎಸ್.ಎಂ. ಕೃಷ್ಣ ಮತ್ತು ಡಿ.ಕೆ.ಶಿವಕುಮಾರ್ ಇಬ್ಬರನ್ನೂ ಅಧಿಕಾರದ ಹುದ್ದೆಗಳಿಂದ ದೂರ ಇಡುತ್ತದೆ. ನಂತರ ಸಮ್ಮಿಶ್ರ ಸರ್ಕಾರವನ್ನು ಕೆಡವಿ, ಬಿಜೆಪಿ ಜೊತೆಯಲ್ಲಿ ಸರ್ಕಾರ ರಚಿಸಿದ ಕುಮಾರಸ್ವಾಮಿಯವರ ರಾಜಕೀಯ ಪರ್ವ ಶುರುವಾಗುತ್ತದೆ. ದೇವೇಗೌಡರ ನಂತರದ ಒಕ್ಕಲಿಗ ಲೀಡರ್ ಆಗಿ ಎಚ್‌ಡಿಕೆ ತಮ್ಮ ಸ್ಥಾನವನ್ನು ಬಲಪಡಿಸಿಕೊಳ್ಳುತ್ತಾರೆ. ಯಡಿಯೂರಪ್ಪನವರಿಗೆ ಅಧಿಕಾರ ಬಿಟ್ಟುಕೊಡದ ಕಾರಣ, ನಂತರ ನಡೆದ ಚುನಾವಣೆಯಲ್ಲಿ ಬಿಜೆಪಿ ಅತಿದೊಡ್ಡ ಪಕ್ಷವಾಗಿ ಹೊಮ್ಮುತ್ತದೆ. ಬಳಿಕ ಶುರುವಾಗಿದ್ದು ಆಪರೇಷನ್ ಕಮಲದ ಕಾಲ. ಸಿದ್ದರಾಮಯ್ಯ ಅವರು ವಿರೋಧ ಪಕ್ಷದ ನಾಯಕರಾಗಿ ಉಚ್ಛ್ರಾಯ ಸ್ಥಿತಿಗೇರಿದ ಕಾಲವೂ ಅದಾಗಿತ್ತು. ಭ್ರಷ್ಟ ಬಿಜೆಪಿಯನ್ನು ಸೋಲಿಸಿ 2013ರಲ್ಲಿ ಕಾಂಗ್ರೆಸ್ ಗೆದ್ದಾಗ ಮುಖ್ಯಮಂತ್ರಿಯಾದ ಸಿದ್ದರಾಮಯ್ಯ ಅವರು ಡಿಕೆ ಶಿವಕುಮಾರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳುತ್ತಾರೆ. ಎಸ್.ಎಂ. ಕೃಷ್ಣ ಅವರು ಕಾಂಗ್ರೆಸ್‌ನಲ್ಲಿ ನೇಪಥ್ಯಕ್ಕೆ ಸರಿದ ಮೇಲೆ ಪ್ರಮುಖ ಒಕ್ಕಲಿಗ ಮುಖವಾಗಿ ಪಕ್ಷವು ಮುಂದೆ ತರಲು ಬಯಸಿದ್ದು ಡಿಕೆ ಶಿವಕುಮಾರ್ ಅವರನ್ನೇ. ಹೀಗಾಗಿ ದೇವೇಗೌಡರ ಫ್ಯಾಮಿಲಿ ವರ್ಸಸ್ ಡಿಕೆ ಶಿವಕುಮಾರ್ ಕುಟುಂಬ ಎಂಬುದು ಸಾಮಾನ್ಯ ಕದನವಾಗಿ ಮಾರ್ಪಡುತ್ತದೆ.

ದೇವೇಗೌಡರ ಕುಟುಂಬ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ಪ್ರತಿಷ್ಠೆಯ ಕದನಕ್ಕೆ ಸಾಕ್ಷಿಯಾದ ಅತ್ಯಂತ ರೋಚಕ ಘಟ್ಟವೆಂದರೆ 2013 ರ ಬೆಂಗಳೂರು ಗ್ರಾಮಾಂತರ ಲೋಕಸಭಾ ಉಪಚುನಾವಣೆ. 2009ರ ಸಾರ್ವತ್ರಿಕ ಚುನಾವಣೆಯಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಎಚ್.ಡಿ. ಕುಮಾರಸ್ವಾಮಿ ಅವರು ಗೆದ್ದು ಸಂಸದರಾಗಿದ್ದರು. ಆದರೆ, 2013ರ ಮೇ ತಿಂಗಳಲ್ಲಿ ನಡೆದ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕುಮಾರಸ್ವಾಮಿ ಅವರು ರಾಮನಗರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗುತ್ತಾರೆ. ಲೋಕಸಭಾ ಸದಸ್ಯ ಸ್ಥಾನಕ್ಕೆ ಎಚ್‌ಡಿಕೆ ರಾಜೀನಾಮೆ ನೀಡಿದ್ದರಿಂದ 2013ರ ಆಗಸ್ಟ್‌ನಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರಕ್ಕೆ ಉಪಚುನಾವಣೆ ಎದುರಾಗುತ್ತದೆ.

ಕಳೆದುಹೋದ ಕ್ಷೇತ್ರವನ್ನು ತನ್ನಲ್ಲೇ ಉಳಿಸಿಕೊಳ್ಳಲು ಕುಮಾರಸ್ವಾಮಿಯವರ ಪತ್ನಿ ಅನಿತಾ ಕುಮಾರಸ್ವಾಮಿ ಅವರನ್ನು ಜೆಡಿಎಸ್ ಕಣಕ್ಕಿಳಿಸುತ್ತದೆ. ಇತ್ತ ಕಾಂಗ್ರೆಸ್‌ನಿಂದ ಶಿವಕುಮಾರ್ ಅವರ ಸಹೋದರ ಡಿ.ಕೆ. ಸುರೇಶ್ ಎದುರಾಳಿಯಾಗುತ್ತಾರೆ. ಇದು ನೇರವಾಗಿ ಗೌಡರ ಕುಟುಂಬ ವರ್ಸಸ್ ಡಿ.ಕೆ. ಸಹೋದರರ ನಡುವಿನ ಪ್ರತಿಷ್ಠೆಯ ಕದನವಾಗಿ ಮಾರ್ಪಡುತ್ತದೆ. ಕಾಂಗ್ರೆಸ್ ಮತ್ತು ಡಿ.ಕೆ. ಸಹೋದರರನ್ನು ಸೋಲಿಸಲೇಬೇಕು ಎಂಬ ಏಕೈಕ ಉದ್ದೇಶದಿಂದ ಅಂದು ಜೆಡಿಎಸ್ ಮತ್ತು ಬಿಜೆಪಿ ಅನಿರೀಕ್ಷಿತ ಒಪ್ಪಂದ ಮಾಡಿಕೊಳ್ಳುತ್ತವೆ. ಬಿಜೆಪಿ ಈ ಕ್ಷೇತ್ರದಿಂದ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸದೆ, ಜೆಡಿಎಸ್‌ನ ಅನಿತಾ ಕುಮಾರಸ್ವಾಮಿ ಅವರಿಗೆ ಬಹಿರಂಗ ಬೆಂಬಲ ಘೋಷಿಸುತ್ತದೆ.

ಇದರಿಂದಾಗಿ ಇಡೀ ಕ್ಷೇತ್ರದಾದ್ಯಂತ ತೀವ್ರ ಕುತೂಹಲ ಸೃಷ್ಟಿಯಾಗುತ್ತದೆ. ಭಾರೀ ಹೈವೋಲ್ಟೇಜ್ ಪ್ರಚಾರ ಮತ್ತು ರಾಜಕೀಯ ತಂತ್ರ-ಪ್ರತಿತಂತ್ರಗಳ ನಂತರ ನಡೆದ ಈ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲುತ್ತದೆ. 2014ರ ಲೋಕಸಭೆ ಚುನಾವಣೆಯಲ್ಲಿ ದೇಶಾದ್ಯಂತ ಬಿಜೆಪಿ ಅಲೆ ಇದ್ದಾಗಲೂ ಶಿವಕುಮಾರ್ ಅವರು ಬೆಂಗಳೂರು ಗ್ರಾಮಾಂತರದಿಂದ ತಮ್ಮ ಸಹೋದರ ಡಿ.ಕೆ. ಸುರೇಶ್ ಅವರನ್ನು ಗೆಲ್ಲಿಸಿಕೊಂಡು ಬಂದು ತಮ್ಮ ಸಾಮರ್ಥ್ಯವನ್ನು ಸಾಬೀತು ಮಾಡುತ್ತಾರೆ.

ಪಕ್ಷ ಸಂಘಟನೆಗೆ ಉದಾರವಾಗಿ ಹಣ ಹರಿಸಬಲ್ಲ, ಡಿಕೆ ಶಿವಕುಮಾರ್ ಅವರನ್ನು ಹೊಸಕಿ ಹಾಕಿದರೆ, ಕಾಂಗ್ರೆಸ್‌ನ ಕೀಲು ಮುರಿದಂತೆ ಎಂದು ತಿಳಿದಿದ್ದ ಕೇಂದ್ರ ಬಿಜೆಪಿ ಸರ್ಕಾರ, ಡಿಕೆ ಶಿವಕುಮಾರ್ ಅವರ ಮೇಲೆ ಕೇಂದ್ರೀಯ ತನಿಖಾ ಸಂಸ್ಥೆಗಳನ್ನು ಪ್ರಯೋಗಿಸಲು ಶುರು ಮಾಡುತ್ತದೆ. ಹಣ ವರ್ಗಾವಣೆ ಮತ್ತು ತೆರಿಗೆ ವಂಚನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ), ಆದಾಯ ತೆರಿಗೆ ಇಲಾಖೆ ಹಾಗೂ ಕೇಂದ್ರೀಯ ತನಿಖಾ ದಳ (ಸಿಬಿಐ) ಸೇರಿದಂತೆ ಹಲವು ಸಂಸ್ಥೆಗಳ ತನಿಖೆಗಳನ್ನು ಡಿಕೆ ಶಿವಕುಮಾರ್ ಎದುರಿಸಬೇಕಾಗುತ್ತದೆ.

ಶಿವಕುಮಾರ್ ಅವರನ್ನು 2019 ರಲ್ಲಿ ಇಡಿ ಬಂಧಿಸಿತ್ತು. ಈ ಬಂಧನವು ರಾಜಕೀಯ ಪ್ರೇರಿತ ಎಂದು ಕಾಂಗ್ರೆಸ್ ಆರೋಪಿಸಿತ್ತು. 2018ರ ಕರ್ನಾಟಕ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಅತಂತ್ರ ಫಲಿತಾಂಶ ಬಂದಾಗ, ಬಿಜೆಪಿಯ ಕುದುರೆ ವ್ಯಾಪಾರಕ್ಕೆ ಅವಕಾಶ ನೀಡದಂತೆ ಶಾಸಕರನ್ನು ಹಿಡಿದಿಟ್ಟುಕೊಳ್ಳುವಲ್ಲಿ ಡಿಕೆ ಶಿವಕುಮಾರ್ ಪ್ರಮುಖ ಪಾತ್ರ ವಹಿಸಿದ್ದರು. ಈ ಕಾರಣಕ್ಕಾಗಿಯೇ ಬಿಜೆಪಿ ಸೇಡಿನ ಕ್ರಮ ಜರುಗಿಸಿತ್ತು ಎಂದು ವಿಶ್ಲೇಷಿಸಲಾಗಿತ್ತು. ಅಂತಿಮವಾಗಿ ಜೆಡಿಎಸ್ ಮತ್ತು ಕಾಂಗ್ರೆಸ್ ಸಮ್ಮಿಶ್ರ ಸರ್ಕಾರವನ್ನು ರಚಿಸುವಲ್ಲಿ ಡಿಕೆ ಶಿವಕುಮಾರ್ ಪಾತ್ರ ವಹಿಸಿದ್ದರು.

ದೆಹಲಿಯ ತಿಹಾರ್ ಜೈಲಿನಲ್ಲಿ 50 ದಿನ ಕಳೆದ ನಂತರ ಡಿಕೆ ಶಿವಕುಮಾರ್ ಅವರಿಗೆ ಜಾಮೀನು ಮಂಜೂರಾಯಿತು. ಅವರು ಬೆಂಗಳೂರಿಗೆ ಮರಳಿದಾಗ, ಕಾಂಗ್ರೆಸ್ ನಾಯಕರು ವಿಮಾನ ನಿಲ್ದಾಣದಿಂದ ಬೃಹತ್ ರೋಡ್ ಶೋ ಆಯೋಜಿಸಿದ್ದರು. ಡಿಕೆ ಶಿವಕುಮಾರ್ ಬಂಧನವು ಒಕ್ಕಲಿಗ ಸಮುದಾಯಕ್ಕೆ ಮಾಡಿದ ಅಪಮಾನ ಎಂದು ಪ್ರಚಾರ ಮಾಡಲು ಕಾಂಗ್ರೆಸ್ ಯತ್ನಿಸಿತು. 2023ರಲ್ಲಿ ಕಾಂಗ್ರೆಸ್ ಪಕ್ಷ ಬಹುಮತವನ್ನು ಪಡೆಯುವಲ್ಲಿ ಡಿಕೆ ಶಿವಕುಮಾರ್ ಅವರ ಶ್ರಮ ಇತ್ತು. ಸಹಜವಾಗಿ ಅವರು ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಯಾಗಿದ್ದರು.

2024ರ ಲೋಕಸಭೆ ಚುನಾವಣೆಯಲ್ಲಿ ಜೆಡಿಎಸ್- ಬಿಜೆಪಿ ಮೈತ್ರಿಯಾಗಿದ್ದವು. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಬಿಜೆಪಿಯಿಂದ ಕಣಕ್ಕಿಳಿದದ್ದು ದೇವೇಗೌಡರ ಅಳಿಯ ಡಾ. ಸಿ.ಎನ್. ಮಂಜುನಾಥ್! ಆದರೆ ಈ ಕದನದಲ್ಲಿ ಶಿವಕುಮಾರ್ ಸಹೋದರ ಸುರೇಶ್ ಹೀನಾಯವಾಗಿ ಸೋತಿದ್ದೂ ಉಂಟು. ನಲವತ್ತು ವರ್ಷಗಳ ಚುನಾವಣಾ ರಾಜಕಾರಣದಲ್ಲಿ ಕಾಂಗ್ರೆಸ್ ಏಳುಬೀಳುಗಳೊಂದಿಗೆ ಬೆಳೆದ ಡಿಕೆ ಶಿವಕುಮಾರ್ ಅವರು ದೇವೇಗೌಡರ ಫ್ಯಾಮಿಲಿಯನ್ನು ಎದುರಿಸುತ್ತಲೇ ಬಂದಿದ್ದಾರೆ ಮತ್ತು ಚುನಾವಣೆಗಳಲ್ಲಿ ಏಳುಬೀಳುಗಳನ್ನು ಕಂಡಿದ್ದಾರೆ. ಆದರೆ ಒಕ್ಕಲಿಗ ನಾಯಕತ್ವದ ಪಟ್ಟ ಹಿಡಿಯುವಲ್ಲಿ ಇರಬೇಕಾದ ಇಮೇಜ್ ಡಿಕೆ ಶಿವಕುಮಾರ್ ಅವರಿಗೆ ದಕ್ಕದಾಗಿದ್ದು ದುರಂತವೇ ಸರಿ. ಸಮುದಾಯದ ಮುಖವಾಗಬಲ್ಲ ವರ್ಚಸ್ಸು ಸಹಜವಾಗಿ ಅವರಿಂದ ಹೊಮ್ಮಲಿಲ್ಲ. ಪಕ್ಷ ಸಂಘಟನೆಯ ಕಾರಣಕ್ಕೆ ಸಿಕ್ಕಿರುವ ದೊಡ್ಡ ಅವಕಾಶವನ್ನು ಹೇಗೆ ಬಳಸುತ್ತಾರೆ ಎಂದು ಕಾಲವೇ ನಿರ್ಧರಿಸುತ್ತದೆ.

ರಾಜಕೀಯ ಎದುರಾಳಿಯೊಬ್ಬನನ್ನು ಉನ್ನತ ಹುದ್ದೆಯಲ್ಲಿ ಕೂರಿಸಿರುವುದರಿಂದ ದೇವೇಗೌಡರ ಕುಟುಂಬವು ರಾಜಕೀಯ ದಾಳಗಳನ್ನು ಉರುಳಿಸದೆ ಇರುವುದಿಲ್ಲ. ಮತ್ತೊಂದೆಡೆ ಒಕ್ಕಲಿಗರ ಪ್ರದೇಶದಲ್ಲಿ ಬೇರು ಬಿಡುವುದಕ್ಕೆ ಮತ್ತು ಜೆಡಿಎಸ್ ಪಕ್ಷವನ್ನು ಆಪೋಷನ ತೆಗೆದುಕೊಳ್ಳುವುದಕ್ಕೆ ಕಾಯುತ್ತಿರುವ ಬಿಜೆಪಿ ಹಾಗೂ ಅದರ ಕೇಂದ್ರ ನಾಯಕರು ಡಿಕೆ ಶಿವಕುಮಾರ್ ಮೇಲೂ ಕಣ್ಣಿಡುವುದು ಖಚಿತ.

ರಾಜಕಾರಣದಲ್ಲಿ ಭ್ರಷ್ಟಚಾರವನ್ನು ಮೈಗೆತ್ತಿಕೊಳ್ಳದೆ ಇದ್ದ ಸಿದ್ದರಾಮಯ್ಯನಂಥವರನ್ನೇ ಕೇಂದ್ರ ತನಿಖಾ ಸಂಸ್ಥೆಗಳ ಕುಣಿಕೆಗೆ ಸಿಕ್ಕಿಸಲು ಬಿಜೆಪಿ ಯತ್ನಿಸಿತ್ತು. ಹೀಗಿರುವಾಗ ಈಗಾಗಲೇ ಇ.ಡಿ, ಸಿಬಿಐ ಸಂಕಷ್ಟಗಳನ್ನು ಎದುರಿಸಿರುವ ಡಿಕೆ ಶಿವಕುಮಾರ್ ಅವರ ಮೇಲೆ ಕೇಂದ್ರವು ಮತ್ತೊಂದು ಸುತ್ತಿನ ಕಾರ್ಯಾಚರಣೆಗೆ ಇಳಿಯಬಹುದು. ಪ್ರಮುಖ ಹುದ್ದೆಯಲ್ಲಿರುವ ವ್ಯಕ್ತಿಯ ಮೇಲೆ ದಾಳಿ ಮಾಡುವ ಮೂಲಕ ಕಾಂಗ್ರೆಸ್ಸಿನ ನೈತಿಕ ಸ್ಥೈರ್ಯವನ್ನೂ ಕಸಿಯಬಹುದು. ಬಿಜೆಪಿಯ ಮಿತ್ರ ಪಕ್ಷ ಜೆಡಿಎಸ್ ಕೂಡ ಇಂತಹ ದಾಳಿಗಳನ್ನು ಬೆಂಬಲಿಸಿ, ಡಿಕೆ ಶಿವಕುಮಾರ್ ಅವರನ್ನು ರಾಜಕೀಯವಾಗಿ ಮುಗಿಸಲು ಯತ್ನಿಸಬಹುದು. ಇಂತಹ ರಾಜಕೀಯ ಅಡಕತ್ತರಿಗಳಿಗೆ ಸಿಗಬಾರದೆಂದರೆ ಡಿಕೆ ಶಿವಕುಮಾರ್ ಆದಷ್ಟು ಬೇಗ, ದೊಡ್ಡ ಇಮೇಜ್ ಕಟ್ಟಿಕೊಳ್ಳಬೇಕಾಗುತ್ತದೆ. ಡಿಕೆ ಶಿವಕುಮಾರ್ ಅವರನ್ನು ಮುಟ್ಟಿದರೆ, ಒಂದು ಸಮುದಾಯದ ವೋಟ್ ಬ್ಯಾಂಕ್ ಎದುರು ಹಾಕಿಕೊಂಡಂತೆ, ಡಿಕೆ ಶಿವಕುಮಾರ್ ಅವರನ್ನು ಮುಟ್ಟಿದರೆ ಕರ್ನಾಟಕದ ಒಬ್ಬ ಜನಪ್ರಿಯ ಮುಖ್ಯಮಂತ್ರಿಯನ್ನು ಮುಟ್ಟಿದಂತೆ, ಡಿಕೆ ಶಿವಕುಮಾರ್ ಸಹವಾಸಕ್ಕೆ ಹೋದರೆ ಅಧಿಕಾರ ಹಿಡಿಯುವುದು ಕಷ್ಟವಾಗುತ್ತದೆ ಎಂಬ ಸಂದೇಶ ರವಾನಿಸುವಷ್ಟರ ಮಟ್ಟಿಗೆ ಇಮೇಜ್ ಬೆಳೆದರೆ ಮಾತ್ರ ಡಿಕೆ ಶಿವಕುಮಾರ್ ಅವರ ಅಸ್ತಿತ್ವ ಉಳಿಯುತ್ತದೆ. ಅಡ್ಜೆಸ್ಟ್ಮೆಂಟ್ ರಾಜಕೀಯ ನಡೆಸಲು ಹೋದರೆ, ಪಕ್ಷಕ್ಕೂ, ಸಿದ್ಧಾಂತಕ್ಕೂ, ಅಸ್ತಿತ್ವಕ್ಕೂ ಹೊಡೆತ ಬೀಳುತ್ತದೆ. ಒಕ್ಕಲಿಗರೇ ದೊಡ್ಡಸಂಖ್ಯೆಯಲ್ಲಿರುವ ಭಾಗದಲ್ಲಿ ಬಿಡದಿ ಟೌನ್‌ಶಿಪ್ ಮಾಡಲು ಯತ್ನಿಸುತ್ತಿರುವುದು ಕೂಡ ಡಿಕೆ ಶಿವಕುಮಾರ್ ಅವರಿಗೆ ಭಾರೀ ಹೊಡೆತ ನೀಡಬಹುದು. ''ರೈತರ ಮಗನೆಂದು ಹೇಳುವ ನೀನು ರೈತರ ಬದುಕಿಗೆ ಮುಳುವಾಗುತ್ತಿದ್ದೀಯ'' ಎಂದು ತಿರುಗಿಬಿದ್ದರೆ ಡಿಕೆ ಶಿವಕುಮಾರ್ ಅವರು ಒಕ್ಕಲಿಗರ ಮನಗೆಲ್ಲುವುದು ಕನಸಿನ ಮಾತಾಗುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR